MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 48 | ಶನಿವಾರ :06-12-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 48 | SATURDAY : 06-12-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

# ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಮೂರು ಪರೀಕ್ಷೆ



**ಬೆಂಗಳೂರು, ಡಿ.5–** ಪ್ರಸಕ್ತ ವರ್ಷವೂ ಖಖಐಅ ವಿದ್ಯಾರ್ಥಿಗಳಿಗೆ ಮೂರು ಪರೀಕ್ಷೆಗಳಿರುತ್ತವೆ ಎಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಸ್ಪಷ್ಟಪಡಿಸಿದೆ. ಇತ್ತೀಚಿಗೆ ಎಸ್ ಎಸ್ ಎಲ್ ಸಿ ಪರೀಕ್ಷೆಯ ಒಂದು ಮತ್ತು ಎರಡನೇ ವೇಳಾಪಟ್ಟಿಯನ್ನು ಮಾತ್ರ ಪ್ರಕಟಿಸಲಾಗಿತ್ತು.

ಇದರಿಂದಾಗಿ ಮೂರನೇ ಪರೀಕ್ಷೆ ಬಗ್ಗೆ ಗೊಂದಲಗಳಿದ್ದವು. ಸ್ಪಷ್ಟನೆ ನೀಡಿರುವ ಪರೀಕ್ಷಾ ಮಂಡಳಿ 2025–26ನೇ ಸಾಲಿಗೆ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯ ಒಂದು ಮತ್ತು ಎರಡನೇ ತಾತ್ಕಾಲಿಕ ಕಾರ್ಯ ಸೂಚಿಯನ್ನು ತಯಾರಿಸಿ, ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ.

ಸದರಿ ಪರೀಕ್ಷೆಗಳ ಫಲಿತಾಂಶ ಪ್ರಕಟಣೆಯ ಅವಧಿ ಆಧಾರದ ಮೇಲೆ ಪರೀಕ್ಷೆ ಮೂರರ ವೇಳಾಪಟ್ಟಿಯನ್ನು ಪ್ರಕಟಿಸುವುದಾಗಿ ತಿಳಿಸಿದೆ.ಕಳೆದ ಎರಡು ವರ್ಷಗಳಿಂದ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿಗೆ ಮೂರು ಹಂತದ ಪರೀಕ್ಷೆಗಳನ್ನು ನಡೆಸುವ ಮೂಲಕ ಕರ್ನಾಟಕ ರಾಷ್ಟ್ರ ಮಟ್ಟದಲ್ಲಿ ಗಮನ ಸೆಳೆದಿದೆ. ವಿದ್ಯಾರ್ಥಿಗಳು ಫಲಿತಾಂಶದ ಆತಂಕವಿಲ್ಲದೆ ನಿರ್ಭಯವಾಗಿ ಪರೀಕ್ಷೆ ಬರೆಯುವಂತಹ ವಾತಾವರಣ ನಿರ್ಮಾಣವಾಗಿದೆ.ಈ ಬಾರಿ ಎರಡು ಪರೀಕ್ಷೆಗಳ ವೇಳಾಪಟ್ಟಿ ಮಾತ್ರ ಪ್ರಕಟಿಸಿ ಮೂರನೇ ಪರೀಕ್ಷೆಯ ಬಗ್ಗೆ ಯಾವುದೇ ಸುಳಿವು ನೀಡದೇ ಇದ್ದದ್ದು ಗೊಂದಲಕ್ಕೆ ಕಾರಣವಾಗಿತ್ತು. ಕೊನೆಗೆ ಶಿಕ್ಷಣ ಇಲಾಖೆ ಸ್ಪಷ್ಟನೆ ನೀಡುವ ಮೂಲಕ ಗೊಂದಲಗಳಿಗೆ ತೆರೆ ಎಳೆದಿದೆ.

# ಮಕ್ಕಳ ಪ್ರತಿಭೆಯನ್ನು ಪ್ರೋತ್ಸಾಹಿಸಿ: ವಲಿ ಬಾಬು



ಯುವಮಾರ್ಗ ಸುದ್ದಿ

**ಮಾನ್ವಿ,ಡಿ.5–** ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಕೆಲಸ ನಿರಂತರವಾಗಿ ಆಗಬೇಕು ಎಂದು ಪೋತ್ನಾಳ ಪ್ರೌಢ ಶಾಲೆಯ ಮುಖ್ಯ ಶಿಕ್ಷಕರಾದ ವಲಿಬಾಬು ಅವರು ಹೇಳಿದರು

ತಾಲೂಕಿನ ಚಿಕ್ಕಕೊಟ್ನೇಕಲ್ ಗ್ರಾಮದ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕಶಾಲೆಯಲ್ಲಿ ಶುಕ್ರವಾರ ನಡೆದ ಶಾಲಾ ಶಿಕ್ಷಣ ಇಲಾಖೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕ್ಷೇತ್ರ ಸಮನ್ವಯಾಧಿಕಾರಿಗಳ ಕಚೇರಿ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ 2025–26 ನೇ ಸಾಲಿನ ಪೋತ್ನಾಳ ವಲಯ ಮಟ್ಟದ ಪ್ರತಿಭಾ ಕಾರಂಜಿ ಕಲೋತ್ಸವ ಕಾರ್ಯಕ್ರಮಕ್ಕೆ ಸಸಿಗೆ ನೀರು ಹಾಕುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಶೈಕ್ಷಣಿಕ ಚಟುವಟಿಕೆಗಳಿಗೆ ಪೂರಕವಾಗಿ ಮಕ್ಕಳ ವ್ಯಕ್ತಿತ್ವ ವಿಕಾಸಕ್ಕೆ ಪ್ರತಿಭಾ ಕಾರಂಜಿ ಕಾರ್ಯಕ್ರಮ ಉತ್ತಮ ವೇದಿಕೆ. ಶಿಕ್ಷಕರು ಮಕ್ಕಳ ಸೃಜನಶೀಲತೆ

ಗುಣ ಗುರುತಿಸಿ ಸೂಕ್ತ ಮಾರ್ಗದರ್ಶನ ನೀಡಿರಿ ಎಂದು ತಿಳಿಸಿದರು.

ನಂತರದಲ್ಲಿ ನೌಕರರ ಸಂಘದ ಅಧ್ಯಕ್ಷರಾದ ಸುರೇಶ್ ಕುರ್ಡಿ ಮಾತನಾಡಿ ಸರ್ಕಾರಿ ಶಾಲೆಗಳಲ್ಲಿ ಓದುವ ಮಕ್ಕಳು ಬಡವರ ಮಧ್ಯಮ ವರ್ಗದ ಕುಟುಂಬದವರು.ಅವರ ಶೈಕ್ಷಣಿಕ ಪ್ರಗತಿಗೆ ಪೂರಕವಾಗಿ ಕೆಲಸ ನಿರಂತರವಾಗಿ ಆಗಬೇಕು ಮತ್ತು ಮಕ್ಕಳ ಪ್ರತಿಭೆ ಅರಳಲು ಇಲಾಖೆ ಪ್ರತಿ ವರ್ಷ ಕಾರ್ಯಕ್ರಮ ಆಯೋಜಿಸುತ್ತಿದೆ. ಶಿಕ್ಷಕರು ನ್ಯಾಯಬದ್ಧ ತೀರ್ಪು ನೀಡಿರಿ ಎಂದು ಶಿಕ್ಷಕರಿಗೆ ಕಿವಿಮಾತು ತಿಳಿಸಿದರು.

ಈ ಸಂದರ್ಭದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ಸಂಗಮೇಶ ಮುದೋಳ, ಗೋಪಾಲ ನಾಯಕ ಜುಕುರು,ಪೋತ್ನಾಳ ಸಿಆರ್‌ಪಿ ಲಕ್ಷ್ಮೀಕಾಂತ, ಶಾಲಾ ಮುಖ್ಯ ಶಿಕ್ಷಕಿ ಅಕ್ಕಮಹಾದೇವಿ ಹಾಗೂ ವಿವಿಧ ಶಾಲಾ ಮುಖ್ಯ ಶಿಕ್ಷಕರಾದ ಗುಂಡಯ್ಯ ನಾಯಕ, ಗುರುರಾಜ, ವಿವಿಧ ಶಾಲೆಗಳ ಸಹ ಶಿಕ್ಷಕಿಯರು ಶಿಕ್ಷಕರು ಹಾಗೂ ಶಾಲಾ ಎಸ್ಡಿಎಂಸಿ ಅಧ್ಯಕ್ಷರು ಮತ್ತು ಸದಸ್ಯರು ಹಾಗೂ ಪೋಷಕರು ಅತಿಥಿ ಶಿಕ್ಷಕರು ಸೇರಿದಂತೆ ಅನೇಕರಿದ್ದರು.

# ಸಚಿವರಾದ ಬೈರತಿ ಸುರೇಶ ಅವರಿಂದ ಫಲಾನುಭವಿಗಳಿಗೆ ನಾನಾ ಸೌಲಭ್ಯ ವಿತರಣೆ

ಯುವಮಾರ್ಗ ಸುದ್ದಿ

**ರಾಯಚೂರು,ಡಿ.5–**ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಾದ ಬೈರತಿ ಸುರೇಶ ಅವರು ಇತ್ತೀಚೆಗೆ ರಾಯಚೂರು ಪ್ರವಾಸ ಕೈಗೊಂಡ ವೇಳೆ ನಾನಾ ಯೋಜನೆಗಳ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಿಸಿದರು.

ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಸಭೆಯ ಪೂರ್ವದಲ್ಲಿ ಮೊದಲಿಗೆ ಎ.ಹೆಚ್.ಪಿ ಮನೆಗಳ ಹಕ್ಕುಪತ್ರವನ್ನು ಲಾಯಿಕ್ ಅಂಜುಮ್ ಗಂಡ ಮಸಿಂ ಅಕ್ರಮನ್, ಮಹಾದೇವಿ ಗಂಡ ಯುವರಾಜ್, ಪರಶುರಾಮ ತಂದೆ ದೊಡ್ಡ ಸುಗಪ್ಪ, ಶೇಖರ ತಂದೆ ಯಸುದಾಸ್, ನಜೀಯಾ ಬೇಗಂ ಗಂಡ ಮೌಲಾ ಅವರಿಗೆ ವಿತರಣೆ ಮಾಡಲಾಯಿತು.

ಶಿಲ್ಪ ತಂದೆ ಕೆ.ಜಯಪ್ರಕಾಶ್, ಮಮತಾ ತಂದೆ ಶಿವರಾಜ, ಸುಮತಿ ಗಂಡ ಸೂಗೂರಪ್ಪ, ಲಕ್ಷ್ಮೀ ಗಂಡ ನರಸಿಂಹ ಹಾಗೂ ವಿದ್ಯಾ ಗಂಡ ವಿನೋದ್ ಅವರಿಗೆ ಕಮ್ಯುನಿಟಿ ಮೊಬೈಲ್ ಲೈಜರ್ ಆದೇಶದ ಪತ್ರ ವಿತರಣೆ ಮಾಡಲಾಯಿತು.

ಲಲಿತಾ / ಮಲ್ಲಿಕಾರ್ಜುನ, ವೆಂಕಟೇಶ / ಮಲ್ಲಿಕಾರ್ಜುನ, ಕಮಲಾಬಾಯಿ ಗಂಡ ಶಿವಗೇಣಿ, ಪದ್ಮಾ ಗಂಡ ಆಂಜನೇಯ್ಯ ಹಾಗೂ ಹನುಮಂತ ತಂದೆ ನರಸಿಂಹ ಅವರಿಗೆ ಕಂದಾಯ ಆದಾಲತ್ ನಲ್ಲಿ ಎಕ್ಸೈಸ್ ಖಾತ



ವಿತರಣೆ ಮಾಡಲಾಯಿತು.

ಅತ್ಯುತ್ತಮವಾಗಿ ತೆರಿಗೆ ಪಾವತಿಸಿದ್ದಕ್ಕೆ ರಾಯಚೂರ ಸಿಟಿಯ ನಾಗರಿಕರಾದ ಆಂಜನೇಯ, ತ್ರಿವಿಕ್ರಮ ಜೋಶಿ, ರಾಘವೇಂದ್ರ ಕಮಲಾಪುರ, ಅರ್ಪತಾ ಅಗರವಾಲ್, ಗೋವಿಂದ ನಾರಾಯಣ, ಪ್ರಕಾಶ ಮುಂಡಾಂಡ ಅವರಿಗೆ ಗೌರವಿಸಲಾಯಿತು.

ಅತ್ಯುತ್ತಮ ಕರವಸೂಲಿಗಾರರಾದ ಶಾಹೀದಾ ಬೇಗಂ, ಬಸವರಾಜ, ವಿನಯ ಕುಮಾರ್, ರಾಜು ಹಾಗೂ ನಾರಾಯಣ ಅವರಿಗೆ ಸಹ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ರಾಯಚೂರು ನಗರ ಕ್ಷೇತ್ರದ (2ನೇಪುಟಕ್ಕೆ..)

# ಪ್ರತಿ ವಿದ್ಯಾರ್ಥಿ ಕೂಡ ವೈಜ್ಞಾನಿಕ ಅಭ್ಯಾಸ ಕ್ರಮವನ್ನು ಅಳವಡಿಸಿಕೊಳ್ಳಬೇಕು : ಡಾ.ಮಧುಸೂಧನ್ ಕಾರಿಗನೂರು

ಯುವಮಾರ್ಗ ಸುದ್ದಿ



**ಮಾನ್ವಿ,ಡಿ.5–** ಪಟ್ಟಣದ ನೇತಾಜಿ ಶಿಕ್ಷಣ ಸಂಸ್ಥೆ ಆವರಣದಲ್ಲಿ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕ, ಹಾಗೂ ತಾಲೂಕು ಘಟಕ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ , ಹಾಗೂ ಮಾಧ್ಯಮ ಸಮಿತಿ, ಸೃಜನಾ ಫೌಂಡೇಶನ್ – ಭಾರತೀಯ ವೈದ್ಯಕೀಯ ಸಂಘ ಸಿರುಗುಪ್ಪ, ಸಂಯುಕ್ತಾಶ್ರಯದಲ್ಲಿ ನಡೆದ ನೆನಪಿಗೆ ವ್ಯಾಯಾಮ ಮತ್ತು ಸೋತು ಗೆದ್ದ ಸಾಧಕರಿವರು ವಿದ್ಯಾರ್ಥಿಗಳಿಗೆ ಪ್ರೇರಣಾ ತರಗತಿಯ ಕಾರ್ಯಕ್ರಮದಲ್ಲಿ ಡಾ. ಮಧುಸೂಧನ್ ಕಾರಿಗನೂರು ಶಸ್ತ್ರವೈದ್ಯರು ಸಿರುಗುಪ್ಪ ಉಪನ್ಯಾಸ ನೀಡಿ ತರಗತಿಯ ಎಲ್ಲಾ ವಿದ್ಯಾರ್ಥಿಗಳಿಗೆ ಶೇ 80 ರಷ್ಟು ಅಂಕಗಳನ್ನು ಪಡೆಯುವ ಸಾಮರ್ಥ್ಯ ಇದ್ದರು ಕೂಡ ಅವರು ಸರಿಯಾದ ರೀತಿಯಲ್ಲಿ ಓದುವ ಅಭ್ಯಾಸವನ್ನು ರೂಡಿಸಿಕೊಳ್ಳದೆ ಇರುವುದರಿಂದ ಅತ್ಯಂತ ಕಡಿಮೆ ಅಂಕಗಳನ್ನು ಪಡೆಯುತ್ತಿದ್ದಾರೆ ಪ್ರತಿ ವಿದ್ಯಾರ್ಥಿ ಕೂಡ ವೈಜ್ಞಾನಿಕ ಅಭ್ಯಾಸ ಕ್ರಮವನ್ನು ಅಳವಡಿಸಿಕೊಳ್ಳಬೇಕು ಪ್ರತಿ ಅಭ್ಯಾಸದ ನಡುವೆ ವಿಶ್ರಾಂತಿಯನ್ನು ಪಡೆದುಕೊಂಡು ಅಸಮಯದಲ್ಲಿ ಇತರ ಚಟುವಟಿಕೆಗಳನ್ನು ,ನಡೆಸುವುದರಿಂದ ನಾವು ಅಭ್ಯಾಸ ನಡೆಸಿದ ವಿಷಯಗಳು ನೆನಪಿನಲ್ಲಿ ಉಳಿಯುವುದಕ್ಕೆ ಸಾಧ್ಯವಾಗುತ್ತದೆ ಕೇವಲ ಓದುವುದರ ಜೋತೆಗೆ ಪುನರ ನಮನ ಹಾಗೂ ನಮ್ಮಲಿನ ಎಡ ಮೆದುಳನ್ನು ಬಳಸುವ ಕುರಿತು ವ್ಯಾಯಮ ಮಾಡಿದಲ್ಲಿ ಹೆಚ್ಚು ಸಮಯದವರೆಗೆ ವಿಷಯ ನೆನಪಿನಲ್ಲಿ ಉಳಿಯುವುದಕ್ಕೆ ಸಾಧ್ಯವಾಗುತ್ತದೆ. ಪರಿಕ್ಷೇ ಸಮಯದಲ್ಲಿ ಅತಂಕಕ್ಕೆ ಒಳಗಾಗದೆ ಶಾಂತ ರೀತಿಯಿಂದ ಉತ್ತರಗಳನ್ನು ಬರೆಯುವ ಮೂಲಕ ಹೆಚ್ಚು ಅಂಕಗಳನ್ನು ಪಡೆಯುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಜಿಲ್ಲಾ ಕ.ಸಾ.ಪ.ಗೌರವ ಕಾರ್ಯದರ್ಶಿಗಳಾದ ತಾಯಪ್ಪ ಬಿ.ಹೊಸೂರು ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ (2ನೇಪುಟಕ್ಕೆ)

# ಸಂಕ್ರಾಂತಿ ವೇಳೆಗೆ ಶುಭ ಸುದ್ದಿ ನಿರೀಕ್ಷೆಯಲ್ಲಿ ಡಿಕೆಶಿ



**ಬೆಂಗಳೂರು, ಡಿ.5–** ಸಂಕ್ರಾಂತಿಯ ವೇಳೆಗೆ ಶುಭ ಸುದ್ದಿ ದೊರೆಯಲಿದೆ ಎಂಬ ವಿಶ್ವಾಸದಲ್ಲಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸಿದ್ದರಾಮಯ್ಯ ಬಣದ ನಾಯಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವ ಪ್ರಯತ್ನ ಮುಂದುವರಿಸಿದ್ದಾರೆ. ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿಯವರನ್ನು ನಿನ್ನೆ ಮತ್ತೊಮ್ಮೆ ಭೇಟಿಯಾಗಿ ಮನವೊಲಿಸುವ ಪ್ರಯತ್ನ ನಡೆಸಿದ್ದಾರೆ. ಅಧಿಕಾರ ಹಂಚಿಕೆಯ ಗೊಂದಲದಲ್ಲಿ ಸತೀಶ್ ಜಾರಕಿಹೊಳಿ ಕೇಂದ್ರ ಬಿಂಧುವಾಗಿದ್ದು, ಸಿದ್ದರಾಮಯ್ಯ ಅವರ ಬಣದಲ್ಲಿ ಮುಂಚೂಣಿಯಲ್ಲಿ ನಿಂತು ಕೆಲಸ ಮಾಡುತ್ತಿದ್ದಾರೆ.

ಪದೇಪದೇ ಸಚಿವರ ಶಾಸಕರ ಭೋಜನ ಕೂಟಗಳ ಮೂಲಕ ಸಿದ್ದರಾಮಯ್ಯ ಅವರ ಮುಂದಾಳಾಗಿದ್ದಾರೆ. ಸತೀಶ್ ಜಾರಕಿಹೊಳಿ, ಸಿದ್ದರಾಮಯ್ಯ ಅವರಿಗೆ ಆನೆ ಬಲ ಎಂದೇ ಬಿಂಬಿಸಲಾಗಿದೆ. ಈ ಹಿನ್ನೆಲೆಯಲ್ಲಿ ಡಿ.ಕೆ.ಶಿವಕುಮಾರ್, ಸತೀಶ್ ಜಾರಕಿಹೊಳಿಯವರನ್ನು ಎರಡನೇ ಬಾರಿಗೆ ಭೇಟಿಯಾಗಿರುವುದು ನಾನಾ ರೀತಿಯ ವ್ಯಾಖ್ಯಾನಗಳಿಗೆ ಕಾರಣವಾಗಿದೆ.

ಸತೀಶ್ ಜಾರಕಿಹೊಳಿ ಕೆಪಿಸಿಸಿ ಅಧ್ಯಕ್ಷ ಸ್ಥಾನದ ಮೇಲೆ ಕಣ್ಣಿಟ್ಟಿದ್ದಾರೆ. ತನೂಲಕ 2028ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಮತ್ತೆ ಮರಳಿ ಅಧಿಕಾರಕ್ಕೆ ಬಂದರೆ ತಾವು ಮುಖ್ಯಮಂತ್ರಿಯಾಗುವುದಾಗಿಯೂ ಪದೇ ಪದೇ ಹೇಳುತ್ತಿದ್ದಾರೆ. ಡಿ.ಕೆ.ಶಿವಕುಮಾರ್ ಭೇಟಿಯ ಬಳಿಕವೂ ಸತೀಶ್ ಜಾರಕಿಹೊಳಿ ತಮ ನಾಯಕತ್ವದ ನಿಷ್ಠೆ ಬದಲಾಯಿಸಿಲ್ಲ. ಸಿದ್ದರಾಮಯ್ಯ ಅವರನ್ನು ಬಿಟ್ಟು ತಾವು ಬರುವುದಿಲ್ಲ ಎಂದು ಹೇಳಿರುವುದಾಗಿ ತಿಳಿದು ಬಂದಿದೆ. ಡಿ.ಕೆ.ಶಿವಕುಮಾರ್ ತಮ ಪ್ರಯತ್ನವನ್ನು (2ನೇಪುಟಕ್ಕೆ..)

## ರಾಯಚೂರು ಜಿಲ್ಲಾ ಪೊಲೀಸ್ ಇಲಾಖೆಯಿಂದ ಜಾಗೃತಿ ಕಾರ್ಯಕ್ರಮ

# ಸೈಬರ್ ಅಪರಾಧ ತಡೆಗೆ ಮುನ್ನೆಚ್ಚರಿಕೆ ಅಗತ್ಯ: ಎಸ್ಪಿ ಎಂ.ಪುಟ್ಟಮಾದಯ್ಯ ಸಲಹೆ

ಯುವಮಾರ್ಗ ಸುದ್ದಿ




**ರಾಯಚೂರು.ಡಿ.5–**ಆಧುನಿಕ ತಂತ್ರಜ್ಞಾನದ ಯುಗದಲ್ಲಿ ಸೈಬರ್ ಅಪರಾಧ ಪ್ರಕರಣಗಳು ದಿನೇದಿನೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಜಾಗೃತಿ ಕಾರ್ಯಕ್ರಮಗಳು ಪ್ರತಿಯೊಬ್ಬರಿಗೂ ತಲುಪುವಂತಾಗುವ ದಿಸೆಯಲ್ಲಿ ಕಾರ್ಯಗಾರ ಆಯೋಜಿಸಲಾಗಿದೆ. ಸೈಬರ್ ಅಪರಾಧ ತಡೆಯಲು ಮುನ್ನೆಚ್ಚರಿಕೆ ವಹಿಸಬೇಕೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಪುಟ್ಟಮಾದಯ್ಯ ಅವರು ಹೇಳಿದರು.

ಶುಕ್ರವಾರ ದಂದು ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಜಗಜ್ಯೋತಿ ಬಸವೇಶ್ವರ ಸಭಾಂಗಣದಲ್ಲಿ ಪೊಲೀಸ್ ಇಲಾಖೆಯಿಂದ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಶಾಲೆ–ಕಾಲೇಜುಗಳ ಪ್ರಾಂಶುಪಾಲರು ಮತ್ತು ಶಿಕ್ಷಕರಲ್ಲಿ ಸೈಬರ್ ಅಪರಾಧಗಳ ಬಗ್ಗೆ ಜಾಗೃತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಟೆಕ್ನಾಲಜಿ ಎಷ್ಟೇ ಬೆಳೆದಿದ್ದರೂ ಅಪರಾಧಗಳ ಸಂಖ್ಯೆಯು ಹೆಚ್ಚಾಗುತ್ತಲೇ ಇದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಭಾಗಿಯಾದ ಪ್ರತಿಯೊಬ್ಬರು ಕನಿಷ್ಟ 10 ಸೈಬರ್ ಅಪರಾಧಗಳ ಬಗ್ಗೆ ಜನಕ್ಕೆ ಮನವರಿಕೆ ಮಾಡಿದಲ್ಲಿ ಜಿಲ್ಲೆಯಲ್ಲಿ ಅಪರಾಧಗಳ ಸಂಖ್ಯೆ ಕಡಿಮೆ ಮಾಡಬಹುದಾಗಿದೆ ಎಂದು ಅವರು ಸಲಹೆ ಮಾಡಿದರು.

ಈ ವೇಳೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ, ನಾವೆಲ್ಲರೂ 21ನೇ ಶತಮಾನವು ಟೆಕ್ನಾಲಜಿಗೆ ಹೆಸರಾಗಿದೆ. ಇದರಿಂದಾಗಿ ವಿವಿಧ ಕ್ಷೇತ್ರಗಳಲ್ಲಿ ಪ್ರಗತಿ ಕಾಣುತ್ತಿದೆ. ಆದಾಗ್ಯೂ ಅಪರಾಧಗಳ ಸಂಖ್ಯೆಯು ಹೆಚ್ಚುತ್ತಿವೆ.

ಸೈಬರ್ ಕ್ರೈಂಗೆ ಹಿರಿಯ ನಾಗರಿಕರನ್ನು ಹೆಚ್ಚಾಗಿ ಗುರಿಯಾಗಿಸಲಾಗುತ್ತದೆ ಎಂದು ತಿಳಿಸಿದರು.

ಶಾಲಾ–ಕಾಲೇಜು ಹಾಗೂ ಹಾಸ್ಟೆಲ್ ವಿದ್ಯಾರ್ಥಿಗಳು ಎಚ್ಚರದಿಂದ ಮೊಬೈಲ್ ಬಳಕೆ ಮಾಡಬೇಕು. ಸೈಬರ್ ಕ್ರೈಂ ಬಗ್ಗೆ ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸಬೇಕು. ಮುಂದಿನ ದಿನಗಳಲ್ಲಿ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಮೂಲಕ ಸೈಬರ್ ಕ್ರೈಂ ಕುರಿತು ಜಾಗೃತಿ ಮೂಡಿಸಲು ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ಈ ವೇಳೆ ರಾಯಚೂರು ಕಂದಾಯ ವಿಭಾಗದ ಸಹಾಯಕ ಆಯುಕ್ತರಾದ ಗಜಾನನ ಬಾಳೆ ಅವರು ಮಾತನಾಡಿ, ಕೆಲ ವ್ಯಕ್ತಿಗಳು ಬೇರೊಬ್ಬರ ಅಸಾಹಕತೆಯನ್ನೇ ದುರ್ಬಳಕೆ ಮಾಡಿಕೊಂಡು ಸೈಬರ್ ಕ್ರೈಂಗೆ ಗುರಿಪಡಿಸುತ್ತಾರೆ. ಯಾರೇ ಆಗಲಿ ಆಸೆ–ಆಕಾಂಕ್ಷಿಗಳಿಗೆ ಒಳಗಾಗಬಾರದು ಎಂದು ತಿಳಿಸಿದರು. ಸೈಬರ್ ಕ್ರೈಂಗೆ ನಿವೃತ್ತ ಹಂತದ ಅಧಿಕಾರಿಗಳು ಹಾಗೂ ನಿವೃತ್ತಿ ಹೊಂದಿದ (2ನೇಪುಟಕ್ಕೆ..)

## ಮೊದಲನೇಯ ಪುಟದಿಂದ

# ಪ್ರತಿ ವಿದ್ಯಾರ್ಥಿ ಕೂಡ ವೈಜ್ಞಾನಿಕ ಅಭ್ಯಾಸ ಕ್ರಮವನ್ನು ಅಳವಡಿಸಿಕೊಳ್ಳಬೇಕು : ಡಾ.ಮಧುಸೂಧನ್ ಕಾರಿಗನೂರು

ಸಾಹಿತ್ಯ ಕ್ಷೇತ್ರದ ಅಭಿವೃದ್ಧಿಯ ಜೋತೆಗೆ ನಾಡಿನ ನೆಲ,ಜಲ,ಭಾಷೆ, ರಕ್ಷಣೆಗಾಗಿ ನಿರಂತರವಾಗಿ ಹೋರಾಟ ಮಾಡುತ್ತ ಬಂದಿದ್ದು ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ದಿಗಾಗಿ ವಿವಿಧ ಶೈಕ್ಷಣಿಕ ಉಪನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಾಸ್ಯ ಕಲಾವಿದರಾದ ನರಸಿಂಹ ಮೂರ್ತಿ ಹಾಸ್ಯ ಪ್ರಸಂಗಗಳ ಮೂಲಕ ನಗೆಗಡಲಿನಲ್ಲಿ ತೇಲಿಸಿದರು. ಬಳ್ಳಾರಿಯ ವಿಜ್ಞಾನ ಶಿಕ್ಷಕರಾದ ಎಸ್.ಎಂ.ಹಿರೇಮಠ ವಿಜ್ಞಾನ ಗೀತೆಗಳನ್ನು ಹಾಡಿದರು. ಪಕ್ಷಿ ಪ್ರೇಮಿ ಸಲ್ಲಾವುದಿನ್ ಪಕ್ಷಿಗಳ ಕುರಿತು ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಕೆ.ಪಿ.ಎಸ್.ವಿ.ಎಸ್.ಅಯುರ್ವೇದಿಕ್ ಮೆಡಿಕಲ್ ಕಾಲೇಜಿನ ಮತ್ತು ಆಸ್ಪತ್ರೆಯ ಪ್ರಾಚಾರ್ಯರಾದ ಡಾ.ಜೀವನೇಶ್ವರಯ್ಯ, ನೇತಾಜಿ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿಗಳಾದ ಕೆ.ವಿಜಯಲಕ್ಷ್ಮಿ ??೯, ತಾಲೂಕು ಕ.ಸಾ.ಪ.ಅಧ್ಯಕ್ಷರಾದ ಶರಣಬಸವ ನೀರಮಾನ್ವಿ, ಕೆ.ರಾಜರವಿವರ್ಮ, ಕೆ.ಇ. ನರಸಿಂಹ,ಅ.ಖಿ.ಭಾ.ವೀ.ಲಿಂ.ಮಹಾಸಭಾ ಮಾನ್ವಿ ತಾ.ಅಧ್ಯಕ್ಷರಾದ ಅರುಣ್ ಚಂದಾ ಹಾಗೂ ಮಾಧ್ಯಮ ಸಮಿತಿಯ ಅಧ್ಯಕ್ಷರಾದ ರಾಜಶೇಖರಸ್ವಾಮಿ , ಸಿದ್ದಾರಾಮಯ್ಯಸ್ವಾಮಿ,ಕಿಡಿಗಣಯ್ಯಸ್ವಾಮಿ,ಚನ್ನಬಸವಸ್ವಾಮಿ, ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

# ಸಚಿವರಾದ ಬೈರತಿ ಸುರೇಶ ಅವರಿಂದ ಫಲಾನುಭವಿಗಳಿಗೆ ನಾನಾ ಸೌಲಭ್ಯ ವಿತರಣೆ

ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಇದ್ದರು.

# ಸೈಬರ್ ಅಪರಾಧ ತಡೆಗೆ ಮುನ್ನೆಚ್ಚರಿಕೆ ಅಗತ್ಯ: ಎಸ್ಪಿ ಎಂ.ಪುಟ್ಟಮಾದಯ್ಯ ಸಲಹೆ

ಅಧಿಕಾರಿಗಳು ಹೆಚ್ಚಾಗಿ ಬಲಿಯಾಗುತ್ತಾರೆ ಎಂಬ ಕಟುವಾಸ್ತವವನ್ನು ಸಾರ್ವಜನಿಕರು ಅರಿಯಬೇಕು ಎಂದು ತಿಳಿಸಿದರು.

ಟೆಲಿಫೋನ್ ಎಂದು, ಪಾರ್ಸಲ್, ಕೋರಿಯರ್ ಹೆಸರಿನಲ್ಲಿ ಕರೆಮಾಡಿ ಕೆಲವರು ವಂಚನೆ ಮಾಡುತ್ತಿದ್ದು, ಎಚ್ಚರದಿಂದಿರಬೇಕು.

ಕಾನೂನು ಬಾಹಿರ ವಸ್ತುಗಳನ್ನು ಹೊರದೇಶಕ್ಕೆ ರವಾನೆ ಮಾಡಿದ್ದಿರಿ. ಅದಕ್ಕಾಗಿ ನಿಮಗೆ ವಿಡಿಯೊ ಕಾಲ್ ಮೂಲಕ ವಿಚಾರಣೆ ಮಾಡಿ ಡಿಜಿಟಲ್ ಅರೆಸ್ಟ್ ಮಾಡುವುದಾಗಿ ಹೆದರಿಸಿ ಹಣ ಪಡೆದುಕೊಂಡು ವಂಚನೆ ಮಾಡುವವರ ಬಗ್ಗೆ ಸಹ ಎಚ್ಚರವಾಗಿರಬೇಕು ಎಂದರು.

ಸೈಬರ್ ಅಪರಾಧಗಳ ಸುರಕ್ಷಾ ಸಲಹೆಗಳು: ವಾಟ್ಸಪ್ ಮೂಲಕ ಬರುವ ಪಿ.ಎಂ. ಕಿಸಾನ್, ಮುದ್ರಾ ಯೋಜನೆ, ಬ್ಯಾಂಕ್ ಕೆ.ವೈ.ಸಿ ಅಪ್‌ಡೇಟ್ ಹಾಗೂ ವೆಡ್ಡಿಂಗ್ ಕಾರ್ಡ್ ಹೆಸರಿನಲ್ಲಿ ಬರುವ ಎ.ಪಿ.ಕೆ ಫೈಲ್ ಲಿಂಕ್‌ಗಳನ್ನು ಡೌನ್ ಲೋಡ್ ಮಾಡಬಾರದು. ಅಲ್ಲದೆ ಕಡಿಮೆ ಅವಧಿಯಲ್ಲಿ ಟ್ರೇಂಡಿಂಗ್ ಮಾಡಿ ಹಣ ಡಬಲ್ ಮಾಡಿಕೊಡುವುದಾಗಿ ವಾಟ್ಸಪ್ ಹಾಗೂ ಟೆಲಿಗ್ರಾಮ್ ಮೂಲಕ ಬರುವ ಜಾಹೀರಾತುಗಳನ್ನು ನಂಬಿ ಟ್ರೇಡಿಂಗ್ ಮಾಡಲು ಹಣ ಹೂಡಿಕೆ ಮಾಡಬಾರದು. ಅಪರಿಚಿತರೊಂದಿಗೆ ನಿಮ್ಮ ಬ್ಯಾಂಕಿಂಗ್ ಮಾಹಿತಿಗಳಾದ ಎಟಿಎಮ್ ಕಾರ್ಡ ನಂಬರ್, ಮುಕ್ತಾಯದ ಅವಧಿ, ಸಿವಿವಿ, ಓಟಿಪಿ, ಯುಪಿಐ ಪಿನ್ ಮತ್ತು ಎಂಪಿನ್ ಮಾಹಿತಿಗಳನ್ನು ಹಂಚಿಕೊಳ್ಳಬಾರದು. ಯಾವುದೇ ಬ್ಯಾಂಕಿನವರು ಓಟಿಪಿ ಕೇಳುವುದಿಲ್ಲ. ಅಪರಿಚಿತರ ಮೂಲದ ಎಸ್.ಎಂ.ಎಸ್. ವಾಟ್ಸಪ್ ಹಾಗೂ ಇತರೆ ಮೆಸೆಂಜರ್‌ಗಳ ಮೂಲಕ ಸ್ವೀಕರಿಸುವ ಸಂದೇಶ, ಇ–ಮೇಲ್‌ಗಳಲ್ಲಿನ ಲಿಂಕ್‌ಗಳನ್ನು ಕ್ಲಿಕ್ ಮಾಡಬಾರದು. ಅಲ್ಲದೆ ಗೂಗಲ್‌ನಲ್ಲಿ ಕಂಡುಬರುವ ಕಸ್ಟಮರ್ ಕೇರ್ ಸಂಪರ್ಕ ಸಂಖ್ಯೆ, ಇ–ಮೇಲ್ ವಿಳಾಸ ಇತ್ಯಾದಿಗಳನ್ನು ಬಳಸುವ ಮೊದಲು ನೈಜತೆ ಬಗ್ಗೆ ತಿಳಿದುಕೊಳ್ಳಬೇಕು. ಆನ್‌ಲೈನ್ ಮೂಲಕ ಕಡಿಮೆ ಬಡ್ಡಿ ದರದಲ್ಲಿ ಸಾಲ ನೀಡುವ (ಲೋನ್ ಆಪ್) ಅನಧೀಕೃತ ಅಪ್ಲಿಕೇಷನ್ ಗಳನ್ನು ಬಳಸಬಾರದು. ಆನ್‌ಲೈನ್ ಮೂಲಕ ಕೆಲಸ ಕೊಡಿಸುವುದಾಗಿ ಹಣದ ಬೇಡಿಕೆ ಇಟ್ಟಲ್ಲಿ ಯಾವುದೇ ಕಾರಣಕ್ಕೂ ಹಣ ವರ್ಗಾಯಿಸಬಾರದು. ಮತ್ತು ನಿಮ್ಮ ಬ್ಯಾಂಕ್ ಖಾತೆ, ಸಾಮಾಜಿಕ ಜಾಲತಾಣದ ಖಾತೆಗಳಿಗೆ ಕಠಿಣ ಪಾಸ್ವರ್ಡ ಬಳಸಿ, ಅಂಚೆ ಮೂಲಕ ನಿಮ್ಮ ವಿಳಾಸಕ್ಕೆ ನೀವು ಕ್ಯಾಶ್ ಬಹುಮಾನ ಗೆದ್ದಿರುವಿರಿ ಅಂತ ಯಾವುದೇ ಪತ್ರ ಬಂದರೆ ಅದಕ್ಕೆ ಸ್ಪಂದನೆ ಮಾಡಬಾರದು ಎಂದು ಕಾರ್ಯಕ್ರಮದಲ್ಲಿ ಜಾಗೃತಿ ಮೂಡಿಸಲಾಯಿತು.

ಇದೇ ಸಂದರ್ಭದಲ್ಲಿ ರಿಮ್ಸ್ ನಿರ್ದೇಶಕರಾದ ಡಾ.ರಮೇಶ ಬಿ.ಕೆ., ಕೃಷಿ ವಿವಿಯ ವಿಸ್ತರಣಾಧಿಕಾರಿ ಡಾ.ಎ.ಆರ್.ಕುರಬರ್, ನಿವೃತ್ತ ಅಧಿಕಾರಿಗಳಾದ ಪರಮವೀರ್, ಮಹಾದೇವಪ್ಪ ಹಾಗೂ ಪೊಲೀಸ್ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಕಾಲೇಜ್ ಶಿಕ್ಷಣ ಇಲಾಖೆ ಅಧಿಕಾರಿಗಳು, ವಿದ್ಯಾರ್ಥಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಸಂಕ್ರಾಂತಿ ವೇಳೆಗೆ ಶುಭ ಸುದ್ದಿ ನಿರೀಕ್ಷೆಯಲ್ಲಿ ಡಿಕೆಶಿ

ನಿಲ್ಲಿಸಿಲ್ಲ. ನೆನ್ನೆ ರಾತ್ರಿ ಇಬ್ಬರು ನಾಯಕರು ಭೇಟಿಯಾಗುವ ಮೂಲಕ ಸುದೀರ್ಘ ಮಾತುಕತೆ ನಡೆಸಿದ್ದಾರೆ. ಮೂಲಗಳ ಪ್ರಕಾರ ಜನವರಿಯ ವೇಳೆಗೆ ನಾಯಕತ್ವ ಬದಲಾವಣೆಯಾಗಲಿದೆ ಡಿ.ಕೆ.ಶಿವಕುಮಾರ್ ಅವರಿಗೆ ಹೈಕಮಾಂಡ್ ಮಣೆ ಹಾಕಲಿದೆ ಎಂಬ ವದ್ಧಂತಿಗಳಿವೆ. ಈ ನಿಟ್ಟಿನಲ್ಲಿ ಡಿ.ಕೆ.ಶಿವಕುಮಾರ್ ಅವರ ಸತತ ಪ್ರಯತ್ನಗಳು ಮುಂದುವರೆದಿವೆ.

# ಭಕ್ತರ ಬಾಳು ಬೆಳಗಿದ ಸಚ್ಚಿದಾನಂದ ಮಹಾರಾಜ

**ಬೀದರ್: ಡಿ.5–**ಸದ್ಗುರು ಸಚ್ಚಿದಾನಂದ ಮಹಾರಾಜರು ಭಕ್ತರ ಬಾಳು ಬೆಳಗಿದ್ದರು ಎಂದು ಜಹೀರಾಬಾದ್ ತಾಲ್ಲೂಕಿನ ಮಲ್ಲಯ್ಯ ಗಿರಿ, ದೇಗಲಮಡಿ ಹಾಗೂ ಬಸವಕಲ್ಯಾಣ ಆಶ್ರಮದ ಪೀಠಾಧಿ ಪತಿ ಡಾ. ಬಸವಲಿಂಗ ಅವಧೂತರು ಬಣ್ಣಿಸಿದರು.

ತಾಲ್ಲೂಕಿನ ಕಾಶೆಂಪೂರ(ಪಿ) ಗ್ರಾಮದಲ್ಲಿ ಬುಧವಾರ ಸದ್ಗುರು ಸಚ್ಚಿದಾನಂದ ಮಹಾರಾಜರ 9ನೇ ಜಾತ್ರಾ ಮಹೋತ್ಸವ ಪ್ರಯುಕ್ತ ಆಯೋಜಿಸಿದ್ದ ಪ್ರವಚನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪವಾಡ ಪುರುಷರಾಗಿದ್ದ ಅವರು ಭಕ್ತರಿಗೆ ಸನ್ಮಾರ್ಗ ತೋರುತ್ತಿದ್ದರು. ತಮ್ಮ ಬಳಿ ಬಂದ ಭಕ್ತರ ಕಷ್ಟಗಳನ್ನು ಪರಿಹರಿಸುತ್ತಿದ್ದರು ಎಂದು ನುಡಿದರು.

ಜೀವನದಲ್ಲಿ ಸುಖ, ಶಾಂತಿ, ನೆಮ್ಮದಿಗಾಗಿ ದೇವರ ಸನ್ನಿಧಿ ಮೋರೆ ಹೋಗಬೇಕು. ಸಂತರು, ಮಹಾತ್ಮರ ಮಾರ್ಗ ಅನುಸರಿಸಬೇಕು. ಆಧ್ಯಾತ್ಮವನ್ನು ಅರಿಯಬೇಕು ಎಂದು ತಿಳಿಸಿದರು.

ಜೀವನ ಬಹಳ ಚಿಕ್ಕದ್ದಾಗಿದೆ. ಕಾರಣ, ಪರಿಸ್ಪರ ಪ್ರೀತಿ, ವಿಶ್ವಾಸ, ಸೌಹಾರ್ದ, ಸಮಾಧಾನದಿಂದ ಬದುಕು ಸಾಗಿಸಬೇಕು. ಬಡತನ ಇದ್ದರೂ ಪ್ರೀತಿಗೆ ಬರವಿಲ್ಲದಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

ಗುರು ಹಿರಿಯರನ್ನು ಸದಾ ಕಾಲ ಗೌರವಿಸಬೇಕು. ಜನ್ಮ ಕೊಟ್ಟ ತಾಯಿ, ತಾಯಿ ಸೇವೆ ಮಾಡಬೇಕು ಎಂದು ತಿಳಿಸಿದರು.

ಮಾಜಿ ಸಚಿವ ಬಂಡೆಪ್ಪ ಕಾಶೆಂಪೂರ ಮಾತನಾಡಿ, ಕಾಶೆಂಪುರ(ಪಿ) ಗ್ರಾಮ ಬಹಳ ವಿಶೇಷವಾಗಿದೆ. ಈ ಗ್ರಾಮದಲ್ಲಿ ಜನಿಸಿದವರು ರಾಜಕಾರಣಿಗಳು, ಉನ್ನತ ಅಧಿಕಾರಿಗಳು ಹಾಗೂ ಗಣ್ಯ ವ್ಯಕ್ತಿಗಳಾಗಿದ್ದಾರೆ ಎಂದು ಹೇಳಿದರು.

ಡಾ. ಬಸವಲಿಂಗ ಅವಧೂತರು ಸರಳ ಸಂತರಾಗಿದ್ದಾರೆ. ಜನರಿಗೆ ಆಧ್ಯಾತ್ಮದ ಸವಿ ಉಣಬಡಿಸುತ್ತಿದ್ದಾರೆ. ಜನರಿಗೆ ಅರ್ಥವಾಗುವ ರೀತಿಯಲ್ಲಿ ಪ್ರವಚನ ನೀಡುವುದರಿಂದ ಅವರ ಪ್ರವಚನಗಳು ಬಹಳ ಪ್ರಭಾವ ಬೀರುತ್ತವೆ ಎಂದು ತಿಳಿಸಿದರು

ಬಸವರಾಜ ಮುತ್ತ್ಯಾ, ಪ್ರಮುಖರಾದ ಸುನೀಲ್ ಗುಮಾಸ್ತಿ, ಸತೀಶ್ ಮೆಕ್ಯಾನಿಕ್, ಸಂಜು ಗುಮಾಸ್ತಿ, ಸಂಜು ತಮಗೊಂಡ, ವಿಶ್ವನಾಥ ಬಾಲೆಬಾಯಿ, ರಾಜಕುಮಾರ ಶಿವಗೊಂಡ, ರವಿ ಗುಮಾಸ್ತಿ ಮತ್ತಿತರರು ಇದ್ದರು.

# ರಂಗಭೂಮಿ ಸಮಾಜದ ನಿಜವಾದ ಪ್ರತಿಬಿಂಬ: ಬಟ್ಟು ಸತ್ಯನಾರಾಯಣ



**ಕಲಬುರಗಿ,ಡಿ.5–** ಸಿಯುಕೆಯಲ್ಲಿ ನಾಟಕ ಮತ್ತು ರಂಗಭೂಮಿಯಲ್ಲಿ ಪುರಾಣ, ಇತಿಹಾಸ ಮತ್ತು ಸಂಪ್ರದಾಯದ ಎರಡು ದಿನಗಳಅಂತರರಾಷ್ಟ್ರೀಯ ಸಮ್ಮೇಳನದ ಸಮಾರೋಪ ಸಮಾರಂಭ ಜರುಗಿತು.

ಸಭೆಯನ್ನುದ್ದೇಶಿಸಿ ಮಾತನಾಡಿದ ಸಿಯುಕೆ ಕುಲಪತಿ ಪ್ರೋ . ಬಟ್ಟು ಸತ್ಯನಾರಾಯಣ, ಅವರು ನಾಟಕವು ನಮ್ಮ ಸಮಾಜದ ನಿಜವಾದ ಕನ್ನಡಿಯಾಗಿದ್ದು, ಮಾನವನು ಪ್ರತಿ ಕಾಲಘಟ್ಟದಲ್ಲಿ ಜೀವನವನ್ನು ಅರ್ಥಮಾಡಿಕೊಳ್ಳಲು ಮತ್ತುಮರು ಪರಿಶೀಲಿಸಿಕೊಳ್ಳಲು ದಾರಿದೀಪವಾಗಿದೆ. ಅದು ನಮ್ಮನ್ನು ಜೀವಂತವಾಗಿರಿಸುತ್ತದೆ ಮತ್ತು ನಮ್ಮ ಇತಿಹಾಸ, ಸಂಸ್ಕೃತಿಮತ್ತು ರಾಷ್ಟದ ಬಗ್ಗೆ ಅರಿವು ಮೂಡಿಸುತ್ತದೆ. ಎಂದು ಹೇಳಿದರು.

ಗೋರಕ್‌ಪುರದ ಧೀನ್ ದಯಾಳ್ ಉಪಾಧ್ಯಾಯ ವಿಶ್ವವಿದ್ಯಾಲಯದ ಪ್ರೋ. ಅಲೋಕ ಕುಮಾರ ಮಾತನಾಡುತ್ತಾ ನಾಟಕವುಮಾನವ ಜೀವನಕ್ಕೆ ಹತ್ತಿರವಾಗಿದ್ದು. ಇದು ವರ್ತಮಾನದ ಬಗ್ಗೆ ಮಾತ್ರವಲ್ಲದೆ ಭವಿಷ್ಯದ ಬಗ್ಗೆಯೂ ಮಾತನಾಡುತ್ತದೆ. ಭಾರತೀಯ ಸಂಸ್ಕೃತಿ ಮತ್ತು ಪರಂಪರೆಯು ಆದಿ ಯುಗದಿಂದಲೂ ಅದರ ಪ್ರದರ್ಶನ ಕಲೆಯಿಂದಾಗಿ ಶ್ರೀಮಂತವಾ ಗಿದೆ. ಪ್ರದರ್ಶನಕಲೆಗಳು ಉತ್ತಮ ಭವಿಷ್ಯದ ಆಶಯವನ್ನು ಜೀವಂತವಾಗಿರಿಸುತ್ತದೆ ಎಂದು ಹೇಳಿದರು.

ಪ್ರೋ ಭೀಮರಾವ್ ಭೋಸಲೆ ಮಾತನಾಡುತ್ತ,ರಂಗಭೂಮಿಯು ಎಲ್ಲಾ ಕಲೆಗಳನ್ನು ಮೇಳೈಸುವ ವಿಶಿಷ್ಟ ಸ್ಥಳವಾಗಿದ್ದು, ಇದುಜೀವನ ಕಲೆಗೆ ನಮ್ಮನ್ನು ಕೊಂಡೋಯ್ಯುತ್ತದೆ. ಪುರಾತನ ಯುಗದಿಂದಲೂ ಇತಿಹಾಸವನ್ನು ಪ್ರದರ್ಶನದೊಂದಿಗೆ ಮರುವ್ಯಾಖ್ಯಾನಿಸಲಾಗಿದೆ. ಸದ್ಗುಣ, ನೈತಿಕತೆ, ನೀತಿಶಾಸ್ತ್ರ ಇತ್ಯಾದಿಗಳನ್ನು ಪ್ರದರ್ಶನದ ಮೂಲಕ ಕಲಿಯಲಾಗುತ್ತದೆ ಮತ್ತು ಪ್ರಚಾರ ಮಾಡಲಾಗುತ್ತದೆ ಎಂದರು

ಭಾಷಾ ನಿಕಾಯದ ಡೀನ್ ಪ್ರೋ ವಿಕ್ರಮ್ ವಿಸಾಜಿ,ಇಂಗ್ಲಿಷ್ ವಿಭಾಗದ ಮುಖ್ಯಸ್ಥ ಪ್ರೋ. ಬಸವರಾಜ ಡೋಣೂರ ಮಾತನಾಡಿದರು.

ಅತ್ಯುತ್ತಮ ಪ್ರಬಂಧ ಪ್ರಶಸ್ತಿಗೆ ತಲಾ ರೂ. 5000 ನಗದು ಬಹುಮಾನವನ್ನು ನೀಡಲಾಗಿದ್ದು, ಅವುಗಳನ್ನು, ಕೇರಳದ ಕ್ಯಾಲಿಕಟ್ ವಿಶ್ವವಿದ್ಯಾಲಯ ಮತ್ತು ಗದಗದ ಕೆಎಸ್‌ಇಯ ಜೆಟಿ ಕಾಲೇಜಿನ ಬಿ ಆರ್ ಚಿನಗುಂಡಿ, ಅಧ್ಯಾಪಕರ ವಿಭಾಗದಲ್ಲಿ, ಸಂಶೋಧನಾರ್ಥಿಗಳ ವಿಭಾಗದಲ್ಲಿ ರಜತ್ ಮೌರ್ಯ ಮತ್ತು ಮಹೇಶ್ ಸಿ ಡಿ, ವಿದ್ಯಾರ್ಥಿಗಳ ವಿಭಾಗದಲ್ಲಿ ಶ್ರೀಕಾಂತ ಕಾಕಡೆ ಮತ್ತು ಚಂದನ ಸಾಗರ ಪಡೆದುಕೊಂಡರು.

ಉದ್ಘಾಟನಾ ಕಾರ್ಯಕ್ರಮದಲ್ಲಿ ಪ್ರೋ. ಶಿವಗಂಗಾ ರುಮ್ಮಾ, ಪ್ರೋ . ಕುಬಕಡ್ಡಿ, ಪ್ರೋ . ದೇವರಾಜಪ್ಪ, ಪ್ರೋ. ರಮಣ ದಡ್ಡಿ, ಡಾ.ರಾಜಶ್ರೀ, ಡಾ. ಅಪ್ಪಗೆರೆ, ಮುಖ್ಯಸ್ಥರು, ಡೀನ್‌ಗಳು, ವಿವಿಧ ರಾಜ್ಯಗಳಿಂದ ಆಗಮಿಸಿದ್ದ ಪ್ರತಿನಿಧಿಗಳು, ಸಂಶೋಧನಾಥಿರ್ಗಳು,ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಡಾ. ಜಯದೇವಿ ಜಂಗಮಶೆಟ್ಟಿ ರಾಷ್ಟಗೀತೆ ಹಾಡಿದರು. ಸಂಘಟನಾ ಕಾರ್ಯದರ್ಶಿ ಡಾ.ರೇಣುಕಾ ನಾಯಕ ಸಮ್ಮೇಳನದ ವರದಿ ಮಂಡಿಸಿದರು. ಸಂಘಟನಾ ಕಾರ್ಯದರ್ಶಿ ಮಹೇಂದ್ರ ಎಂ. ಧನ್ಯವಾದ ಅರ್ಪಿಸಿದರು.ಡಾ. ಆಶಿಶ್ ಅಧಿವೇಶನವನ್ನು ನಿರೂಪಿಸಿದರು.

# ಡಿ.7ರಂದು ಬಸವಕಲ್ಯಾಣದಲ್ಲಿ ಸೂಫಿ–ಸಂತ ಸಮ್ಮೇಳನ: ಸಲಿಮ್ ಅಹಮ್ಮದ್



**ಬೀದರ್,ಡಿ.5–**ಪ್ರವಾದಿಯವರ 1500 ನೇ ಜನ್ಮ ದಿನಾಚರಣೆಯ ಅಂಗವಾಗಿ ಡಿ. 7ರಂದು ಶರಣರ ನಾಡು ಬಸವಕಲ್ಯಾಣದ ಅಲ್ಲಾ ಮೈದಾನದಲ್ಲಿ ಸಂಜೆ ಸೂಫಿ–ಸಂತರ ಸಮ್ಮೇಳನ ಆಯೋಜಿಸಲಾಗುತ್ತಿದೆ ಎಂದು ಕರ್ನಾಟಕ ರಾಜ್ಯದ ಮುಖ್ಯ ಸಚೇತಕ ಹಾಗೂ ಎಂಎಲ್ಸಿ ಸಲೀಂ ಅಹ್ಮದ ತಿಳಿಸಿದರು.

ಈ ಕುರಿತು ನಗರದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿ, ಪ್ರವಾದಿಯವರ 1500 ನೇ ವಾರ್ಷಿಕೋತ್ಸವ ಆಚರಣೆ ಈಗಾಗಲೆ ಹುಬ್ಬಳ್ಳಿ ಮತ್ತು ಕೊಪ್ಪಳದಂತಹ ನಗರಗಳಲ್ಲಿ ಆಚರಿಸಲಾಗಿದ್ದು ಇದು ಮೂರನೆ ಸಮಾವೇಶವಾಗಿದೆ ಎಂದರು.

ಅಂತರರಾಷ್ಟ್ರೀಯ ಖ್ಯಾತಿಯ ವ್ಯಕ್ತಿ ಮೌಲಾನಾ ಮುಹಮ್ಮದ್ ಒಬೈದುಲ್ಲಾ ಖಾನ್ ಆಜ್ಮಿ, ರಾಜ್ಯಸಭೆಯ ಮಾಜಿ ಸದಸ್ಯ ಮತ್ತು ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಕಾನೂನು ಮಂಡಳಿಯ ಉಪಾಧ್ಯಕ್ಷ, ಮಂಡಳಿಯ ಸದಸ್ಯ ಮೌಲಾನಾ ಅಬು ತಾಲಿಬ್ ರಹಮಾನಿ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ ವಕ್ಫ ಕಮಿಟಿ ಅಧ್ಯಕ್ಷರು ಹಾಗೂ ಹಜರತ್ ಹಫೀಜ್ ಅಲಿ ಮುಹಮ್ಮದ್ ಅಲ್ ಹುಸೈನಿ, ಖ್ವಾಜಾ ಬಂದಾ ನವಾಜ್ ದರ್ಗಾದ ಸಜ್ಜಾದಾ ಅವರನ್ನು ಅಭಿನಂದಿಸಲಾಗುವುದು ಎಂದರು.

ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೋಳಿ, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ, ಪೌರಾಡಳಿತ ಸಚಿವ ರಹೀಂ ಖಾನ್, ಮಾಜಿ ಸಚಿವ ರಾಜಶೇಖರ್ ಪಾಟೀಲ್ ಹುಮ್ನಾಬಾದ್, ಮಾಜಿ ಎಂಎಲ್ಸಿ ಅರವಿಂದ್ ಕುಮಾರ್ ಅರಳಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಸೈಯದ್ ನಾಸಿರ್ ಹುಸೇನ್, ಉತ್ತರ ಪ್ರದೇಶದ ಉಸ್ತುವಾರಿ ಸಂಸದ ಇಮ್ರಾನ್ ಮಸೂದ್, ತೆಲಂಗಾಣದ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಮೊಹಮ್ಮದ್ ಅಜರೋದ್ದೀನ್ (ಹೈದ್ರಾಬಾದ್) ಮತ್ತು ಕೆಕೆಆರ್ಡಿಬಿ ಅಧ್ಯಕ್ಷರು ಮತ್ತು ಶಾಸಕ ಡಾ. ಅಜಯ್ ಸಿಂಗ್ ಭಾಗವಹಿಸಲಿದ್ದಾರೆ. ಅಲ್ಲದೇ ಪಕ್ಕದ ಮಹಾರಾಷ್ಟ್ರ ರಾಜ್ಯ ಹಾಗೂ ತೆಲಂಗಾಣದ ಅನೇಕರು ಭಾಗವಹಿಸಲಿದ್ದಾರೆ ಆದ್ದರಿಂದ ಪ್ರವಾದಿ ಅವರ 1500 ನೇ ಭವ್ಯ ವಾರ್ಷಿಕೋತ್ಸವದ ಸಂದರ್ಭದಲ್ಲಿ ನಡೆಯಲಿರುವ ಸೂಫಿ ಸಂತ ಸಮ್ಮೇಳನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಕೋರಿದರು.

ಮಾಜಿ ವಿಧಾನ ಪರಿಷತ್ ಸದಸ್ಯರಾದ ವಿಜಯಸಿಂಗ್ ಮಾತನಾಡಿದರು. ಕೆ.ಪಿ.ಸಿ.ಸಿ ಪ್ರಧಾನ ಕಾರ್ಯದರ್ಶಿ ಮನ್ನಾನ್ ಸೇಠ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ದತ್ತಾತ್ರಿ ಮೂಲಗೆ, ಸಯ್ಯದ್ ಅಲಿ ಖಾದ್ರಿ ಹಾಗೂ ಇತರರು ಪತ್ರಿಕಾಗೋಷ್ಟಿಯಲ್ಲಿದ್ದರು.

# ಹ್ಯಾಂಡ್ ವಾಶ್ ಕುರಿತು ಅರಿವು

**ಬೀದರ್, ಡಿ.5–**ಇತ್ತಿಚೀಗೆ ರಾಯಚೂರಿನ ಗೋನವಾರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹ್ಯಾಂಡ್ ವಾಶ್ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಸ್ಮೈಲ್ ಫೌಂಡೇಶನ್ ವತಿಯಿಂದ ಏರ್ಪಡಿಸಲಾಗಿತ್ತು

ಈ ಕಾರ್ಯಕ್ರಮದಲ್ಲಿ ವೈದ್ಯರು ಶಾಲೆಯ ಮಕ್ಕಳಿಗೆ ಕೈ ತೊಳೆಯುವ ಸರಿಯಾದ ವಿಧಾನಗಳನ್ನು ಮತ್ತು ಹ್ಯಾಂಡ್ ವಾಶ್" ಎಂದರೆ ಕನ್ನಡದಲ್ಲಿ "ಕೈ ತೊಳೆಯುವುದು ಎಂದು ಹೇಳಲಾಗುತ್ತದೆ.

ಕೈಗಳನ್ನು ಸೋಪಿನಿಂದ ಮತ್ತು ನೀರಿನಿಂದ ಸರಿಯಾಗಿ ತೊಳೆಯುವುದರಿಂದ ಅನೇಕ ರೋಗಗಳ ಹರಡುವಿಕೆಯನ್ನು ತಡೆಯಬಹುದು ಮತ್ತು ಆರೋಗ್ಯವನ್ನು ಕಾಪಾಡಿಕೊಳ್ಳಬಹುದು



ಎಂದು ಶಾಲೆಯ ಮಕ್ಕಳಿಗೆ ತಿಳಿಸಿದರು

ನಂತರ ಶಾಲೆಯ ಎಲ್ಲಾ ಮಕ್ಕಳಿಗೆ ಉಚಿತವಾಗಿ ಡೆಟ್ಟಲ್ ಸೋಪನ್ನು ಕೈಗಳನ್ನು ತೊಳೆದಿಕೊಳ್ಳಲು ವಿತರಣೆ ಮಾಡಲಾಯಿತು ಈ ಕಾರ್ಯಕ್ರಮದಲ್ಲಿ ಸ್ಮೈಲ್ ಫೌಂಡೇಶನ್ ಸಿಬ್ಬಂದಿ ಮತ್ತು ಶಾಲೆಯ ಶಿಕ್ಷಕ ಶಿಕ್ಷಕಿಯರು ಭಾಗವಹಿಸಿದ್ದರು

# ಭಾರತದಿಂದ ಶಾಂತಿ ಮಂತ್ರ



**ನವದೆಹಲಿ,ಡಿ.4–** ರಷ್ಯಾ–ಉಕ್ರೇನ್ ನಡುವೆ ನಡೆಯುತ್ತಿರುವ ಯುದ್ಧಕ್ಕೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಭಾರತ ಸದಾ ಶಾಂತಿ ಬೆಂಬಲಿಸುತ್ತದೆ ಪರಸ್ಪರ ಮಾತುಕತೆಯ ಮೂಲಕ ಸಂಘರ್ಷಕ್ಕೆ ಮೂಲಕ ಪರಿಹಾರ ಕಂಡುಕೊಳ್ಳುವ ಅಗತ್ಯವಿದೆ ಎಂದು ಪ್ರಧಾನಿ ನರೇಂದ್ರ ಮೋದಿ ರಷ್ಯಾ ಅಧ್ಯಕ್ಷರಿಗೆ ಸಲಹೆ ನೀಡಿದ್ದಾರೆ.

ರಾಷ್ಟಗಳ ಕಲ್ಯಾಣ 'ಶಾಂತಿಯ ಹಾದಿ'ಯಲ್ಲಿದೆ. ರಷ್ಯಾ ಮತ್ತು ಉಕ್ರೇನ್ ರಾಜತಾಂತ್ರಿಕತೆಯ ಮೂಲಕ ತಮ್ಮ ಭಿನ್ನಾಭಿಪ್ರಾಯ ಮತ್ತು ಸಂಘರ್ಷ ಪರಿಹರಿಸಿಕೊಳ್ಳಬೇಕಾಗಿದೆ. ಭಾರತ ಸದಾ ಶಾಂತಿಯ ಪರವಾಗಿದೆ ಎಂದು ಹೇಳಿದ್ದಾರೆ.

ದೆಹಲಿಯ ಹೈದರಾಬಾದ್ ಹೌಸ್‌ನಲ್ಲಿ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ನಡೆದ ಉನ್ನತ ಮಟ್ಟದ ಮಾತುಕತೆಯ ವೇಳೆ ಪ್ರಧಾನಿ ರಷ್ಯಾ ಅಧ್ಯಕ್ಷರಿಗೆ ಈ ಸಲಹೆ ನೀಡಿದ್ದು ರಷ್ಯಾ – ಉಕ್ರೇನ್ ಸಂಘರ್ಷಕ್ಕೆ ಪರಿಹಾರ ಕಂಡುಕೊಳ್ಳುವ ಬದ್ಧತೆಯನ್ನು ಪ್ರದರ್ಶಿಸಬೇಕು ಎಂದು ಸಲಹೆ ನೀಡಿದ್ದಾರೆ.

ಭಾರತ ಮತ್ತು ರಷ್ಯಾ ಒಟ್ಟಾಗಿ ಜಗತ್ತನ್ನು ಶಾಂತಿ ಸಮೃದ್ಧಿಯ ಕಡೆಗೆ ಕೊಂಡೊಯ್ಯಬಹುದು. ಉಕ್ರೇನ್ ಬಿಕ್ಕಟ್ಟು ಪ್ರಾರಂಭವಾದಾಗಿನಿಂದ, ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ನಿರಂತರ ಚರ್ಚೆಯಲ್ಲಿದ್ದೇವೆ. ಕಾಲಕಾಲಕ್ಕೆ, ನೀವೂ ಕೂಡ ನಿಜವಾದ ಸ್ನೇಹಿತರಾಗಿ ಎಲ್ಲದರ ಬಗ್ಗೆ ನಮಗೆ ಮಾಹಿತಿ ನೀಡುತ್ತಿದ್ದೀರಿ. ನಂಬಿಕೆ ಒಂದು ದೊಡ್ಡ ಶಕ್ತಿ ಎಂದು ನಾನು ನಂಬುತ್ತೇನೆ, ಮತ್ತುಈ ವಿಷಯವನ್ನು ನಿಮ್ಮೊಂದಿಗೆ ಹಲವು ಬಾರಿ ಚರ್ಚಿಸಿದ್ದೇನೆ ಮತ್ತು ಅದನ್ನು ಪ್ರಪಂಚದ ಮುಂದೆ ಪ್ರಸ್ತುತಪಡಿಸಿದ್ದೇನೆ" ಎಂದು ಹೇಳಿದ್ದಾರೆ

ಇತ್ತೀಚಿನ ದಿನಗಳಲ್ಲಿ, ಜಾಗತಿಕ ಸಮುದಾಯದ ನಾಯಕರೊಂದಿಗೆ ಮಾತನಾಡುವಾಗಲೆಲ್ಲಾ ಮತ್ತು ಉಕ್ರೇನ್ – ರಷ್ಯಾ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಿದಾಗಲೆಲ್ಲಾ, ಭಾರತ ತಟಸ್ಥವಾಗಿಲ್ಲ ಎಂದು ಯಾವಾಗಲೂ ಹೇಳಿದ್ದೇನೆ. ಭಾರತ ಸ್ಪಷ್ಟವಾದ ನಿಲುವನ್ನು ಹೊಂದಿದೆ ಮತ್ತು ಆ ನಿಲುವು ಶಾಂತಿಗಾಗಿದೆ. ಶಾಂತಿಯ ಕಡೆಗೆ ನಾವು ಪ್ರತಿಯೊಂದು ಪ್ರಯತ್ನವನ್ನೂ ಬೆಂಬಲಿಸುತ್ತೇವೆ" ತಿಳಿಸಿದ್ದಾರೆ

ಭಾರತದ ಕಡೆಯಿಂದ, ರಷ್ಯಾ ಶಾಂತಿಯುತ ಪರಿಹಾರಕ್ಕಾಗಿ ಕೆಲಸ ಮಾಡಲಿದೆ ಅದನ್ನು ಮುಂದೆಯೂ ಮುಂದುವರಿಸಲಿದೆ ಎಂದು ಹೇಳಿದ್ದಾರೆ.

ರಕ್ಷಣೆ, ವ್ಯಾಪರ ಸೇರಿ ಹಲವು ವಿಷಯಗಳ ಚರ್ಚೆ

ಶಾಂಘೈ ಸಹಕಾರ ಸಂಸ್ಥೆಯ ಶೃಂಗಸಭೆಯಲ್ಲಿ ಉಭಯ ನಾಯಕರು ಭೇಟಿ ಮಾಡಿ ಸಮಾಲೋಚನೆ ನಡೆಸಿದ ಸುಮಾರು ಮೂರು ತಿಂಗಳ ನಂತರ ಇಬ್ಬರು ನಾಯಕರು ದೆಹಲಿಯ ಹೈದರಾಬಾದ್ ಹೌಸ್ ನಲ್ಲಿ ನಾಯಕರು ಚರ್ಚೆ ನಡೆಸಿ. ರಕ್ಷಣೆ,ವ್ಯಾಪಾರ, ಇಂಧನ ಸೇರಿದಂತೆ ವಿವಿಧ ವಿಯಗಳ ಕುರಿತು ಮಹತ್ವದ ಒಪ್ಪಂದ ಮಾಡಿಕೊಂಡಿದ್ಧಾರೆ

ಹಲವು ಒಪ್ಪಂದಗಳಿಗೆ ಸಹಿ;

ಭಾರತ– ರಷ್ಯಾ ಭಾಂಧವ್ಯ ಬಲವರ್ಧನೆ ಮತ್ತಷ್ಟು ಬಲಗೊಳಿಸುವ ಸಂಬಂಧ ಸುದೀರ್ಘ ಚರ್ಚೆ ನಡೆಸಿದರು. ಈ ವೇಳೆ ವಿದೇಶಾಂಗ ಸಚಿವ ಡಾ. ಎಸ್ ಜೈಶಂಕರ್, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸೇರಿದಂತೆ ಕೇಂದ್ರ ಸರ್ಕಾರದ ಹಲವು ಸಚಿವರು, ಉನ್ನತ ಅಧಿಕಾರಿಗಳು ಹಾಗು ರಷ್ಯಾದ ರಕ್ಷಣೆ, ವಿದೇಶಾಂಗ ಸಚಿವರು ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

ಬಳಿಕ ರಕ್ಷಣೆ, ವ್ಯಾಪಾರ, ಇಂಧನ ಸೇರಿದಂತೆ ಪ್ರಮುಖ ವಿಷಯಗಳ ಕುರಿತು ಉಭಯ ನಾಯಕರ ಸಮ್ಮುಖದಲ್ಲಿ ಪರಸ್ಪರ ಒಪ್ಪಂದ ಮಾಡಿಕೊಳ್ಳಲಾಯಿತು.

ಇದಕ್ಕೂ ಮುನ್ನ ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿದ ಪ್ರಧಾನಿ ನರೇಂದ್ರ ಮೋದಿ ಅವರು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರನ್ನು ಭಾರತಕ್ಕೆ ಸ್ವಾಗತಿಸಲು ಸಂತೋಷವಾಗುತ್ತಿದೆ. ಭಾರತ–ರಷ್ಯಾ ಸ್ನೇಹವು ಕಾಲಾತೀತವಾಗಿದ್ದು, ಇದು ನಮ್ಮ ಜನರಿಗೆ ಹೆಚ್ಚಿನ ಪ್ರಯೋಜನವನ್ನು ನೀಡಿದೆ" ಎಂದು ಹೇಳಿದ್ದಾರೆ.

ರಕ್ಷಣಾ, ವ್ಯಾಪಾರ, ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಸಂಸ್ಕೃತಿ ಮತ್ತು ಮಾನವೀಯ ವ್ಯವಹಾರಗಳಲ್ಲಿ ಸಹಕಾರವನ್ನು ಬಲಪಡಿಸುವ ಬಗ್ಗೆ ಸುದೀರ್ಘ ಸಮಾಲೋಚನೆ ನಡೆಸಲಾಗಿದೆ ಎಂದು ಹೇಳಿದ್ದಾರೆ.

ಸಾಂಪ್ರದಾಯಿಕ ಸ್ವಾಗತ:

ಎರಡು ದಿನಗಳ ಭಾರತ ಭೇಟಿಗೆ ನಿನ್ನೆ ರಾತ್ರಿ ದೆಹಲಿಗೆ ಆಗಮಿಸಿದ್ದ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರನ್ನು ಪಾಲಂ ವಿಮಾನ ನಿಲ್ದಾಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಖುದ್ದು ಹಾಜರಿದ್ದು ಬರಮಾಡಿಕೊಂಡಿದ್ದರು.


ಇಂದು ಬೆಳಗ್ಗೆ ರಾಷ್ಟಪತಿ ಭವನದಲ್ಲಿ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರಿಗೆ ಸಾಂಪ್ರದಾಯಿಕ ಸ್ವಾಗತ ನೀಡಲಾಯಿತು. ಈ ವೇಳೆ ರಾಷ್ಟಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಉಭಯ ದೇಶದ ಸಚಿವರು, ಹಿರಿಯ ಅಧಿಕಾರಿಗಳ ನಿಯೋಗದ ಹಲವು ಸದಸ್ಯರು ಉಪಸ್ಥಿತರಿದ್ದರು.

ರಾಜ್‌ಘಾಟ್ ಗೆ ಭೇಟಿ: ನಮನ ಸಲ್ಲಿಕೆ

ಇದಕ್ಕೂ ಮೊದಲು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ರಾಜ್‌ಘಾಟ್‌ಗೆ ಭೇಟಿ ನೀಡಿ ಮಹಾತ್ಮ ಗಾಂಧಿಯವರಿಗೆ ಗೌರವ ಸಲ್ಲಿಸಿದರು. "

ಈ ವೇಳೆ ಸಂದರ್ಶನ ಪುಸ್ತಕದಲ್ಲಿ ಪುಟಿನ್ ಅವರು ಆಧುನಿಕ ಭಾರತದ ಸ್ಥಾಪಕರಲ್ಲಿ ಒಬ್ಬರಾದ, ಮಹಾನ್ ತತ್ವಜ್ಞಾನಿ ಮತ್ತು ಮಾನವತಾವಾದಿ ಮಹಾತ್ಮ ಗಾಂಧಿಯವರು ವಿಶ್ವ ಶಾಂತಿಗೆ ಅಪಾರ ಕೊಡುಗೆ ನೀಡಿದ್ದಾರೆ. ಸ್ವಾತಂತ್ರ್ಯ, ಒಳ್ಳೆಯತನ ಮತ್ತು ಮಾನವೀಯತೆಯ ಬಗ್ಗೆ ಅವರ ವಿಚಾರಗಳು ಇಂದಿಗೂ ತಮ್ಮ ಪ್ರಸ್ತುತತೆಯನ್ನು ಕಳೆದುಕೊಂಡಿಲ್ಲ" ಎಂದು ಅವರು ಬರೆದಿದ್ದಾರೆ.

# ರಾಜ್ಯದಲ್ಲಿನ ರಾಜಕೀಯ ಬೆಳವಣಿಗೆ :ಬಿಎಸ್‌ವೈ ದೆಹಲಿಗೆ



**ಬೆಂಗಳೂರು, ಡಿ. 5–** ರಾಜ್ಯ ಬಿಜೆಪಿ ಅಧ್ಯಕ್ಷರ ನೇಮಕಕ್ಕೆ ಸಂಬಂಧಿಸಿದಂತೆ ಬಿಜೆಪಿಯ ಭಿನ್ನಮತೀಯ ಬಣದ ನಾಯಕರು ದೆಹಲಿ ಯಾತ್ರೆ ನಡೆಸಿ ವರಿಷ್ಠರನ್ನು ಭೇಟಿ ಮಾಡಿದ ಬೆನ್ನಲ್ಲೆ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರು ದೆಹಲಿಗೆ ತೆರಳಿರುವುದು ಚರ್ಚೆಗೆ ಗ್ರಾಸವಾಗಿದೆ.

ದೆಹಲಿಯಲ್ಲಿ ಕಳೆದ ಮೂರು ದಿನಗಳಿಂದ ಬೀಡು ಬಿಟ್ಟಿದ್ದ ಭಿನ್ನಮತೀಯ ನಾಯಕರುಗಳು ಬಿಜೆಪಿಯ ವರಿಷ್ಠರನ್ನು ಭೇಟಿ ಮಾಡಿ ಬಿಜೆಪಿ ರಾಜ್ಯಾಧ್ಯಕ್ಷರನ್ನಾಗಿ ಸಂಘ ಪರಿವಾರದ ಮೂಲದವರನ್ನು ನೇಮಕ ಮಾಡಿ ವಿಜಯೇಂದ್ರ ಅವರ ವಿರುದ್ಧ ದೂರು ನೀಡಿರುವ ಹಿನ್ನೆಲೆಯಲ್ಲಿ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರು ದೆಹಲಿಗೆ ತೆರಳಿದ್ದು, ವರಿಷ್ಠರನ್ನು ಭೇಟಿ ಮಾಡಿ ವಸ್ತುಸ್ಥಿತಿಯನ್ನು ಅವರ ಗಮನಕ್ಕೆ ತರುವರು ಎಂದು ಹೇಳಲಾಗಿದೆ.

ಬಿಜೆಪಿ ರಾಜ್ಯಾಧ್ಯಕ್ಷರಾಗಿ ವಿಜಯೇಂದ್ರ ಕಳೆದ ಎರಡು ವರ್ಷಗಳಿಂದ ಉತ್ತಮವಾಗಿ ಕೆಲಸ ಮಾಡುತ್ತಾ ಪಕ್ಷ ಸಂಘಟನೆ ನಡೆಸಿದ್ದಾರೆ. ಅನಗತ್ಯವಾಗಿ ಅವರ ವಿರುದ್ಧ ಕೆಲ ನಾಯಕರು ನಿಂತಿದ್ದಾರೆ. ವಿಜಯೇಂದ್ರ ಅವರು ಅಧ್ಯಕ್ಷರಾಗಿ ಏನೆಲ್ಲಾ ಕೆಲಸ ಮಾಡಿದ್ದಾರೆ ಎಂಬುದನ್ನು ವರಿಷ್ಠರಿಗೆ ಮನವರಿಕೆ ಮಾಡಿ ಬಿಜೆಪಿ ಅಧ್ಯಕ್ಷರಾಗಿ ವಿಜಯೇಂದ್ರ ಅವರನ್ನೇ ಮುಂದುವರೆಸುವ ಘೋಷಣೆ ಮಾಡುವಂತೆ ಯಡಿಯೂರಪ್ಪ ಅವರು ವರಿಷ್ಠರ ಮುಂದೆ ಬೇಡಿಕೆ ಇಡಲಿದ್ದಾರೆ ಎಂದು ಹೇಳಲಾಗಿದೆ.

ಶತಾಯ–ಗತಾಯ ತಮ್ಮ ಪುತ್ರ ವಿಜಯೇಂದ್ರ ಅವರನ್ನು ಅಧ್ಯಕ್ಷರನ್ನಾಗಿ ಮುಂದುವರೆಸಲು ದೆಹಲಿ ಮಟ್ಟದಲ್ಲಿ ಕೇಂದ್ರ ನಾಯಕರನ್ನು ಭೇಟಿ ಮಾಡಿ ಎಲ್ಲವನ್ನು ಮನವರಿಕೆ ಮಾಡುವ ಕೆಲಸವನ್ನು ಯಡಿಯೂರಪ್ಪ ಮಾಡುವರು ಎಂದು ಹೇಳಲಾಗಿದೆ.

ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರು ದೆಹಲಿ ಭೇಟಿಯ ಗುಪ್ತನ್ನು ಅವರ ಆಪ್ತರು ಬಿಟ್ಟುಕೊಟ್ಟಿಲ್ಲ. ಇದೊಂದು ಖಾಸಗಿ ಭೇಟಿ ಎಂದು ಹೇಳುತ್ತಿರುವವರಾದರೂ ಸಂಸತ್ ಅಧಿವೇಶನ ನಡೆಯುತ್ತಿರುವ ಈ ಸಂದರ್ಭದಲ್ಲಿ ಯಡಿಯೂರಪ್ಪ ಅವರು ದೆಹಲಿಗೆ ತೆರಳಿರುವುದು ವರಿಷ್ಠರನ್ನು ಭೇಟಿ ಮಾಡಿ ತಮ್ಮ ಪುತ್ರನನ್ನು ಅಧ್ಯಕ್ಷ ಪಟ್ಟಕ್ಕೆ ಯಾವುದೇ ತೊಂದರೆಯಾಗದಂತೆ ಮುತುವರ್ಜಿ ವಹಿಸುವರು ಎಂದು ಹೇಳಲಾಗಿದೆ.

ದೆಹಲಿ ನಾಯಕರು ರಾಜ್ಯ ಬಿಜೆಪಿಯಲ್ಲಿನ ಗುಂಪುಗಾರಿಕೆ ಎಲ್ಲದರ ಬಗ್ಗೆಯೂ ಮಾಹಿತಿ ಪಡೆದಿದ್ದು, ಹೊಸ ಅಧ್ಯಕ್ಷರನ್ನು ನೇಮಿಸಬೇಕೇ ಇಲ್ಲವೆ ವಿಜಯೇಂದ್ರ ಅವರನ್ನೇ ಮುಂದುವರೆಸಬೇಕೆ ಎಂದು ಸಮಾಲೋಚನೆ ನಡೆಸಿರುವಾಗಲೇ ಯಡಿಯೂರಪ್ಪ ಅವರು ರಂಗ ಪ್ರವೇಶಿಸಿ ತಮ್ಮ ಪುತ್ರನ ಪರ ಲಾಬಿ ನಡೆಸಿದ್ದಾರೆ.

ಪಕ್ಷದ ವರಿಷ್ಠರು ಭಿನ್ನಮತೀಯ ನಾಯಕರು ತಮ್ಮನ್ನು ಭೇಟಿ ಮಾಡಿದ ಸಂದರ್ಭದಲ್ಲಿ ರಾಜ್ಯ ಬಿಜೆಪಿ ಬೆಳವಣಿಗೆ ಬಗ್ಗೆ ನಮ್ಮ ಬಳಿ ಮಾಹಿತಿ ಇದೆ. ನೀವು ಬಹಿರಂಗವಾಗಿ ಏನನ್ನೂ ಮಾತನಾಡಬಾರದು. ಸೂಕ್ತ ಸಮಯ ನೋಡಿಕೊಂಡು ರಾಜ್ಯಾಧ್ಯಕ್ಷರ ನೇಮಕ ವಿಚಾರದಲ್ಲಿ ನಾವು ನಿರ್ಧಾರ ಮಾಡುತ್ತೇವೆ. ಅಲ್ಲಿಯವರೆಗೆ ಸುಮ್ಮನಿರಿ ಎಂದು ಭಿನ್ನಮತೀಯರಿಗೆ ಕಟ್ಟಾಜ್ಞೆ ವಿಧಿಸಿದೆ. ಹಾಗಾಗಿ ದೆಹಲಿಗೆ ತೆರಳಿದ್ದ ಭಿನ್ನಮತೀಯ ನಾಯಕರು ಬಹಿರಂಗವಾಗಿ ತಮ್ಮ ಭೇಟಿಯ ಗುಟ್ಟನ್ನು ಬಿಟ್ಟಿಲ್ಲ.

ಈ ಬೆಳವಣಿಗೆ ನಡುವೆಯೇ ಯಡಿಯೂರಪ್ಪನವರು ದೆಹಲಿಗೆ ತೆರಳಿರುವುದು ರಾಜ್ಯ ಬಿಜೆಪಿಯಲ್ಲಿ ಚಟುವಟಿಕೆಗಳು ಗರಿಗೆದರಿದಂತಾಗಿವೆ. ವರಿಷ್ಠರ ತೀರ್ಮಾನ ಕುತೂಹಲ ಮೂಡಿಸಿದೆ.

# ಕನ್ನಡ ಸಿನಿಮಾ ರಂಗದ ವಿಕೇಂದ್ರೀಕರಣ ಅಗತ್ಯ: ವಿ.ಮನೋಹರ್



**ಕಲಬುರಗಿ,ಡಿ.5–**ಸಿನಿಮಾ ರಂಗವು ಬೆಂಗಳೂರು ಕೇಂದ್ರೀಕೃತವಾಗದೆ ರಾಜ್ಯದ ಇತರ ಭಾಗಗಳಿಗೂ ವಿಸ್ತರಣೆಗೊಂಡು ವಿಕೇಂದ್ರೀಕರಣಗೊಂಡರೆ ಕನ್ನಡ ಚಲನಚಿತ್ರ ರಂಗಕ್ಕೆ ಉತ್ತಮ ಭವಿಷ್ಯವಿದೆ ಎಂದು ಖ್ಯಾತ ಸಿನಿಮಾ ಸಂಗೀತ ನಿರ್ದೇಶಕರಾದ ವಿ. ಮನೋಹರ್ ಅಭಿಪ್ರಾಯಪಟ್ಟಿದ್ದಾರೆ.

ಕಲಬುರಗಿ ಆಕಾಶವಾಣಿಯಲ್ಲಿ ಡಿ. 4 ರಂದು ಕಲ್ಯಾಣವಾಣಿ ನೇರ ಫೋನ್_ಇನ್ ಕಾರ್ಯಕ್ರಮದಲ್ಲಿ " ಬದಲಾಗುತ್ತಿರುವ ಸಿನಿಮಾ ರಂಗ " ಎಂಬ ವಿಷಯದ ಕುರಿತಾಗಿ ಕೇಳುಗರ ಪ್ರಶ್ನೆಗಳಿಗೆ ಉತ್ತರಿಸಿ ಮಾತನಾಡಿ, ಚಲನಚಿತ್ರರಂಗವು ಬೆಂಗಳೂರು ಕೇಂದ್ರೀಕರಿಸಿ ಸಿನಿಮಾ ನಿರ್ಮಾಣವಾಗುತ್ತಿರುವುದರಿಂದ ರಾಜ್ಯದ ಇತರ ಭಾಗಗಳ ಭಾಷೆ, ಸಂಸ್ಕೃತಿ, ಆಚಾರ, ವಿಚಾರಗಳನ್ನು ಒಳಪಡಿಸಿಕೊಳ್ಳಲು ವಿಫಲವಾಗುತ್ತಿದೆ. ರಾಜಧಾನಿ ಬೆಂಗಳೂರಿಗೆ ಇತರ ಪ್ರದೇಶಗಳು ಬಹಳಷ್ಟು ದೂರವಿರುವುದರಿಂದ ಮಧ್ಯ ಕರ್ನಾಟಕ ದಾವಣಗೆರೆಯಂತಹ ಪ್ರದೇಶ ಕೇಂದ್ರೀಕರಿಸಿದರೆ ಉತ್ತಮ. ಉತ್ತರ ಕರ್ನಾಟಕದಲ್ಲಿ ಪ್ರತಿಭಾವಂತ ಕಲಾವಿದರು, ವಿಶಿಷ್ಟ ಭಾಷಾ ಶೈಲಿ ಎಲ್ಲವೂ ಸಮೃದ್ಧವಾಗಿದೆ. ಈ ಭಾಗದಲ್ಲಿ ವೃತ್ತಿರಂಗಭೂಮಿ ಜೀವಂತವಾಗಿದ್ದು ಕವಿ, ಸಾಹಿತಿಗಳು ಸಾಕಷ್ಟು ಸಂಖ್ಯೆಯಲ್ಲಿದ್ದಾ,ರೆ ಆದರೆ ಅವರನ್ನು ಸಿನಿಮಾ ರಂಗವು ಬಳಸಿಕೊಳ್ಳುವಲ್ಲಿ ವಿಫಲರಾಗುತ್ತಿದೆ ಎಂದರು.

ಓಟಿಟಿ ವೇದಿಕೆಯಲ್ಲಿ ಡಬ್ಬಿಂಗ್ ಸಿನಿಮಾಗಳು ಹೆಚ್ಚಾಗಿ ಪ್ರದರ್ಶನಗೊಳ್ಳುತ್ತಿರುವುದರಿಂದ ಕನ್ನಡದಲ್ಲಿ ಬರುವ ಉತ್ತಮ ಚಿತ್ರಗಳು ಸ್ಥಾನ ಪಡೆಯುತ್ತಿಲ್ಲ. ಕನ್ನಡಕ್ಕೆ ಇದು ದೊಡ್ಡ ದುರಂತ ವಾಗಿದೆ. ಸಿನಿಮಾದಲ್ಲಿ ಕೃತಕ ಬುದ್ಧಿಮತ್ತೆ ಹಾಗೂ ಅನಿಮೇಶನ್ ಅಧಿಕ ಬಳಕೆಯಿಂದ ಸಿನಿಮಾ ನೈಜತೆಯನ್ನು ಕಳೆದುಕೊಳ್ಳುತ್ತಿದೆ. ಇದರದ್ದಾಗಿ ಸಹೃದಯಿ ಪ್ರೇಕ್ಷಕನಲ್ಲಿ ರೋಮಾಂಚನ ಮತ್ತು ಮನರಂಜನೆಯ ಸ್ಥಾನವನ್ನು ಕಸಿದುಕೊಳ್ಳುತ್ತಿದೆ ಎಂದರು.

ತಾನು ಸಿನಿಮಾ ನಿರ್ದೇಶಕನಾಗಬೇಕೆಂಬ ನಿರೀಕ್ಷೆಯಿಂದ ಚಿತ್ರರಂಗಕ್ಕೆ ಪ್ರವೇಶ ಮಾಡಿದ್ದು ಉಪೇಂದ್ರ ಅವರಿಂದಾಗಿ ಸಂಗೀತ ನಿರ್ದೇಶಕನಾಗಿ ಬದಲಾದೆ. ವರನಟ ಡಾ.ರಾಜಕುಮಾರ್ ಅವರಂತಹ ಶ್ರೇಷ್ಠ ವ್ಯಕ್ತಿಗಳ ಪ್ರೇರಣೆಯಿಂದ ಸಂಗೀತ ನಿರ್ದೇಶಕನಾಗಿ ಈ ರಂಗದಲ್ಲಿ ಬೆಳೆಯಲು ಪ್ರೊತ್ಸಾಹ ದೊರೆಯಿತು ಎಂದು ಸ್ಮರಿಸಿದರು. ಶೀಘ್ರದಲ್ಲಿ ಬ್ಯೂಟಿ ಮತ್ತು ರುದ್ರಾಭಿಷೇಕಂ ಎರಡು ಸಿನಿಮಾಗಳು ಬಿಡುಗಡೆಗೆ ಸಿದ್ಧವಾಗಿದೆ. ಉತ್ತಮ ಚಿತ್ರಗಳು ಬರುತ್ತಿದ್ದರೂ ವಾರಕ್ಕೆ 10 ರಿಂದ 12 ಸಿನಿಮಾಗಳು ಏಕಕಾಲಕ್ಕೆ ಬಿಡುಗಡೆಗೊಳ್ಳುತ್ತಿರುವರಿಂದ ಒಳ್ಳೆಯ ಸಿನಿಮಾಗಳು ಕೂಡ ಅವುಗಳ ಮಧ್ಯೆ ಸೋತು ಹೋಗುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದರು. ಉತ್ತರ ಕರ್ನಾಟಕದ ಹೊರಾಂಗಣ ಅತ್ಯಂತ ಸುಂದರವಾಗಿದ್ದು ನಿರ್ಮಾಪಕರ ಕೊರತೆಯಿಂದಾಗಿ ಈ ಭಾಗದಲ್ಲಿ ಚಿತ್ರ ನಿರ್ಮಾಣಕ್ಕೆ ಅಡ್ಡಿಯಾಗುತ್ತಿದೆ ಎಂದರು.

ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ಬೆಳಗಾವಿಯ ಶಿವಲಿಂಗಯ್ಯ, ಸುರಪುರದ ರಾಘವೇಂದ್ರ ಭಕ್ರಿ, ಬೀದರ್ ನ ಮೋಹನ್, ಶಿಕಾರಿಪುರದ ಮಹೇಶ್, ಕಲಬುರಗಿಯ ನಂದಿನಿ ಸನ್ ಬಾಲ್, ಅಂಕೋಲಾದ ಉದಯ ಶಶಿ, ವಿಜಯಪುರದ ಮಲ್ಲಿಕಾರ್ಜುನ್, ಆಳಂದ ಮಾದನ ಹಿಪ್ಪರಗದ ಶಿವಲಿಂಗಪ್ಪ ಭದ್ರೆ, ಹಂಪಸಾಗರದ ಸುಭಾನ್ ಕೋರಿ ಬೆಂಗಳೂರಿನ ರಾಜಕಿರಣ್ ಕರೆ ಮಾಡಿ ಸಂವಾದದಲ್ಲಿ ಪಾಲ್ಗೊಂಡರು.

ಈ ಕಾರ್ಯಕ್ರಮವನ್ನು ಸಂಗಮೇಶ್ ಮತ್ತು ಶಾರದಾ ಜಂಬಲದಿನ್ನಿ ನಡೆಸಿಕೊಟ್ಟರು. ಕಾರ್ಯಕ್ರಮ ಮುಖ್ಯಸ್ಥರಾದ ಬಿ.ಸಿದ್ದಣ್ಣ ಅವರು ನಿಲಯದ ಪರವಾಗಿ ವಿ.ಮನೋಹರ್‌ಗೆ ಸ್ವಾಗತ ಕೋರಿ ಹಾಲು ಹಾಗೂ ಕೃತಿ ನೀಡಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಸಿನಿಮಾ ನಿರ್ಮಾಪಕರಾದ ಮಂಜು ಪಾಂಡ ವಪುರ, ನಿವೃತ್ತ ಕಾರ್ಯಕ್ರಮ ಮುಖ್ಯಸ್ಥರಾದ ಡಾ.ಸದಾನಂದ ಪೆರ್ಲ ಮತ್ತು ಅನಿಲ್ ಕುಮಾರ್ ಎಚ್.ಎನ್, ಗೋವಿಂದ ಕುಲಕರ್ಣಿ, ಅನುಷಾ, ವಿಜಯಕುಮಾರ್ ಗೋತಗಿ, ತಪಿತಾ, ಗುರುಬಸಮ್ಮ ದತ್ತಾತ್ರೇಯ, ಪೂಜಾ, ನಿತಿನ್ ಮತ್ತಿತರರು ಉಪಸ್ಥಿತರಿದ್ದರು.

# "ಸಹಕಾರ ರತ್ನ" ಪ್ರಶಸ್ತಿಗೆ ಭಾಜನರಾದ ಅಕ್ಕೋಣೆ ಅವರಿಗೆ ಸನ್ಮಾನ



**ಕಲಬುರಗಿ,ಡಿ.5–**"ಸಹಕಾರ ರತ್ನ" ಪ್ರಶಸ್ತಿಗೆ ಭಾಜನರಾದ ಅಪ್ಪಾರಾವ ಅಕ್ಕೋಣೆ ಅವರನ್ನು ಗುರುವಾರ ನಗರದ ಆದರ್ಶನಗರ ಬಡಾವಣೆಯಲ್ಲಿರುವ ಕೆ.ಸಿ.ಇ. ಡಿ. ಟಿ. ಬಾಲಕಿಯರ ಪ್ರೌಢಶಾಲೆಯಲ್ಲಿ ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಆಡಳಿತ ಮಂಡಳಿಯ ವತಿಯಿಂದ ಸತ್ಕರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅಕ್ಕೋಣೆಯವರು " ನನ್ನ ಜೀವನದ ಅನುಭವದಿಂದ ಕಲಿತ ಪಾಠವೆಂದರೆ ಒಳ್ಳೆಯದನ್ನು ಮಾಡಿ ನಿಮಗೆ ಒಳ್ಳೆಯದಾಗುತ್ತದೆ, ಪ್ರತಿಫಲಾಪೇಕ್ಷೆಯಿಲದೇ ಎಲ್ಲರನ್ನು ಪ್ರೀತಿಸಿ, ಕಷ್ಟದಲ್ಲಿದ್ದವರಿಗೆ ನೆರವಾಗಿ, ಸಮಾಜ ನಿಮ್ಮನ್ನು ಗುರುತಿಸುತ್ತದೆ ಮತ್ತು ಸಹಾಯ ಮಾಡುತ್ತದೆ. ಇದು ಜೀವನದ ಅತ್ಯಂತ ಸರಳ ನಿಯಮ" ಎಂದು ನುಡಿದರು.

ಮುಖ್ಯೋಪಧ್ಯಾಯಿನಿ ಮೀನಾಕ್ಷಿ ಪಲ್ಲೇದ ಸ್ವಾಗತಿಸಿ ಮಾತನಾಡಿದರು. ಸಂಸ್ಥೆಯ ಉಪಾಧ್ಯಕ್ಷ ಬಿ.ಕೆ. ಹಳ್ಳಿ ಅಧ್ಯಕ್ಷತೆವಹಿಸಿದ್ದರು. ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು, ಆಡಳಿತಮಂಡಳಿ ಸದಸ್ಯರು ಹಾಜರಿದ್ದರು. ಗುಲಬರ್ಗಾ ಜಿಲ್ಲಾ ಪದವೀಧರರ ಪತ್ತಿನ ಸಹಕಾರ ಸಂಘದ ವತಿಯಿಂದ ಕೂಡ ಅಕ್ಕೋಣೆಯವರನ್ನು ಪ್ರಶಸ್ತಿ ಪಡೆದುದಕ್ಕಾಗಿ ಸನ್ಮಾನಿಸಲಾಯಿತು. ಸಘದ ಅಧ್ಯಕ್ಷರಾದ ರಾಮಣ್ಣ ಬೆಣ್ಣೆಸುರ, ಉಪಾಧ್ಯಕ್ಷರಾದ ಬಸವರಾಜ. ಆವಂಟಿ ಮತ್ತು ಆಡಳಿತ ಮಂಡಳಿ ಸದಸ್ಯರು ಹಾಜರಿದ್ದರು.

ಗುಲಬರ್ಗಾ ಸಹಕಾರಿ ಒಕ್ಕೂಟದ ಸಿಬ್ಬಂದಿಯವರು ಅಪ್ಪಾರಾವ ಅಕ್ಕೋಣೆಯವರನ್ನು ಸಹಕಾರ ರತ್ನ ಪ್ರಶಸ್ತಿ ಪಡೆದುದಕ್ಕಾಗಿ ಅರುಣಕುಮಾರ ಅವರ ನೇತೃತ್ವದಲ್ಲಿ ಗೌರವಿಸಿದರು.

ಯುವ ಮಾರ್ಗ

ಶನಿವಾರ: 06–12–2025

## ಮಹಾಪರಿನಿರ್ವಾಣ ದಿನಾಚರಣೆಯಲ್ಲಿ ಭಾಗಿಯಾಗಲು ಮನವಿ

**ರಾಯಚೂರು,ಡಿ.5–**ಇಲ್ಲಿನ ಸಮಾಜ ಕಲ್ಯಾಣ ಇಲಾಖೆಯಿಂದ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ ಮಹಾಪರಿನಿರ್ವಾಣ ದಿನಾಚರಣೆಯ ಅಂಗವಾಗಿ ಡಿಸೆಂಬರ್ 06ರ ಬೆಳಿಗ್ಗೆ 9 ಗಂಟೆಗೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ಡಾ.ಅಂಬೇಡ್ಕರ್ ಅವರ ಪುತ್ಥಳಿಗೆ ಪೂಜಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಮತ್ತು ಎಲ್ಲಾ ಗಣ್ಯ ಮಾನ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಷ್ಟ್ರೀಯ ಅಹಿಂದ ಜಿಲ್ಲಾಧ್ಯಕ್ಷರಾಗಿ ಬಸವರಾಜ ನವಲಕಲ್ ನೇಮಕ

ಯುವಮಾರ್ಗ ಸುದ್ದಿ



**ಸಿರವಾರ, ಡಿ.5–**ರಾಷ್ಟ್ರೀಯ ಅಲ್ಪಸಂಖ್ಯಾತರ ಹಿಂದುಳಿದ, ಪರಿಶಿಷ್ಟ ಜಾತಿ ಮತ್ತು ಪಂಗಡ ವರ್ಗದ ರಾಜ್ಯ ಅಧ್ಯಕ್ಷರಾದ ಈ ಶಿವಣ್ಣ ಮುತ್ತಳ್ಳಿ, ಹಾಗೂ ರಾಜ್ಯ ಉಪಾಧ್ಯಕ್ಷರಾದ ಪ್ರಭಾಕರ್ ದೊಡ್ಡನೆ ಇವರ ಆದೇಶದ ಮೇರೆಗೆ ರಾಯಚೂರು ಜಿಲ್ಲೆಗೆ ರಾಷ್ಟ್ರೀಯ ಅಹಿಂದ ಜಿಲ್ಲಾ ಅಧ್ಯಕ್ಷರನ್ನಾಗಿ ಬಸವರಾಜ ನವಲಕಲ್ ಇವರನ್ನು ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಈ ಸಮಯದಲ್ಲಿ ಮಾತನಾಡಿದ ಪ್ರಭಾಕರ್ ದೊಡ್ಡನೆ ಅವರು ಬಸವರಾಜ ಅವರು ಸಂಘದ ತತ್ವ ಸಿದ್ಧಾಂತಕ್ಕೆ ಬದ್ಧರಾಗಿ ಜಿಲ್ಲೆಯ ಅಹಿಂದ ವರ್ಗಗಳ ಏಳಿಗೆಗಾಗಿ ಶ್ರಮವಹಿಸಿ ತಮ್ಮ ಕರ್ತವ್ಯ ನಿರ್ವಹಿಸಬೇಕೆಂದು ಹೇಳಿದರು

### ಬಂಜಾರ ಸೇವಾ ಸಂಘದ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷರಾಗಿ ಸೀತಾರಾಮನಾಯಕ ಚವ್ಹಾಣ್ ಆಯ್ಕೆ

ಯುವಮಾರ್ಗ ಸುದ್ದಿ



**ಅರಕೇರಾ,ಡಿ.5–**ಸಂಘ ರಿ ಜಿಲ್ಲಾ ಘಟಕ ರಾಯಚೂರು ಜಿಲ್ಲಾ ಘಟಕದ ಕಾರ್ಯಾಧ್ಯಕ್ಷರಾಗಿ ಸೀತಾರಾಮನಾಯಕ ಚವ್ಹಾಣ್ ಆಯ್ಕೆಮಾಡಿ ರಾಜ್ಯ ಅಧ್ಯಕ್ಷರಾದ ವಿಜಯಜಾಧವ ಮತ್ತುರಾಜ್ಯ ಉಪಾಧ್ಯಕ್ಷರಾದ ಗೋವಿಂದ ರಾಜ.ಬಿ.ನಾಯಕ ವಕೀಲರು ಆದೇಶ ಮಾಡಿದ್ದಾರೆ.

ತಕ್ಷಣದಿಂದ ಜಾರಿಗೆ ಬರುವಂತೆ ಆಲ್ ಇಂಡಿಯಾ ಬಂಜಾರ ಸೇವಾ ಸಂಘ ರಾಯಚೂರು ಘಟಕ ಅಧಿಕಾರವಹಿಸಿಕೊಂಡು ನಿವು ಸಂಘದ ಸಂವಿಧಾನ ನಿಯಮ ಮತ್ತು ಮಾರ್ಗಸೂಚಿಗಳನ್ನು ಅನುಸರಿಸಿ ಸಂಘದ ಹಿತಾಶಕ್ತಿಹಾಗೂ ಬಂಜಾರ ಸಮಾಜದ ಅಭಿವೃದ್ಧಿಗಾಗಿ ಕಾರ್ಯನಿರ್ವಹಿಸುವುದು ಸಂಘ ಹಾಗೂ ಸಮಾಜ ಹೆಮ್ಮೆ ಪಡುವಂತಹ ಕಾರ್ಯ ಕೈಗೊಳ್ಳಲು ಶ್ರಮಿಸುವಂತೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೇಣು ಹಾಕಿಕೊಂಡು ವಿದ್ಯಾರ್ಥಿನಿ ಆತ್ಮಹತ್ಯೆ

**ಕಲಬುರಗಿ,ಡಿ.5–**ನಗರದ ಎಸ್.ಬಿ.ಕಾಲೇಜಿನ ಸೈನ್ಸ್ ವಿಭಾಗದಲ್ಲಿ ಪಿಯುಸಿ ಪ್ರಥಮ ವರ್ಷದಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದ ವಿದ್ಯಾರ್ಥಿನಿಯೊಬ್ಬಳು ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ.

ಅಫಜಲಪುರ ಪಟ್ಟಣದ ಅಕ್ಷತಾ ಬಸವರಾಜ ಜಮಾದಾರ (17) ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿನಿ.

ಅಕ್ಷತಾ 2025–26ನೇ ಸಾಲಿನ ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ 625ಕ್ಕೆ 619 ಅಂಕ ಪಡೆದು ಜಿಲ್ಲೆಗೆ ತೃತೀಯ ಸ್ಥಾನ ಪಡೆದಿದ್ದರಿಂದ ಪಾಲಕರು ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳಲ್ಲಿ ಒಂದಾದ ಎಸ್.ಬಿ.ಕಾಲೇಜಿನ ಸೈನ್ಸ್ ವಿಭಾಗದಲ್ಲಿ ಪ್ರವೇಶ ಕೊಡಿಸಿದ್ದರು. ಬಳಿಕ ವಿದ್ಯಾರ್ಥಿನಿ ಕಾಲೇಜಿಗೆ ಹೋಗಲು ಆಸಕ್ತಿ ತೋರಲಿಲ್ಲ. ಕಾಲೇಜಿನ ಪ್ರಾಚಾರ್ಯರು ಪಾಲಕರಿಗೆ ಕರೆಸಿ ವಿದ್ಯಾರ್ಥಿನಿ ಮರಳಿ ಮನೆಗೆ ಕಳುಹಿಸಿದ್ದರು. ಬಳಿಕ ಡಿಸೆಂಬರ್ 2 ರಂದು ತಂದೆ ಜೊತೆಗೆ ಕಾಲೇಜಿಗೆ ಮರಳಿ ಹೋಗಿದ್ದಳು. ಆದರೆ ಕಾಲೇಜಿಗೆ ಹೋದ ಮರುದಿನವೇ ವಸತಿ ನಿಲಯದಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ತಿಳಿದುಬಂದಿದೆ. ಅಶೋಕ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

9743497111,9743496111

## ವಲಯ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ: ಸರ್ವೋದಯ ಪಬ್ಲಿಕ್ ಶಾಲೆಯ ವಿದ್ಯಾರ್ಥಿಗಳ ಉತ್ತಮ ಸಾಧನೆ



ಯುವಮಾರ್ಗ ಸುದ್ದಿ

**ಮಾನ್ವಿ,ಡಿ.5–** ಪಟ್ಟಣದ ಕೋನಾಪುರ ಪೇಟೆ ಸರ್ಕಾರಿ ಶಾಲೆಯಲ್ಲಿ ನಡೆದ ಮಾನ್ವಿ ಪೂರ್ವ ವಲಯ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವದಲ್ಲಿ ಸರ್ವೋದಯ ಪಬ್ಲಿಕ್ ಶಾಲೆಯ ವಿದ್ಯಾರ್ಥಿಗಳು ಅದ್ಭುತ ಪ್ರದರ್ಶನ ನೀಡಿ, ಒಟ್ಟಾರೆ 20 ಬಹುಮಾನಗಳನ್ನು ತಮ್ಮದಾಗಿಸಿಕೊಂಡಿದ್ದಾರೆ. ಇದು ಶಾಲೆಯ ಕೀರ್ತಿಯನ್ನು ಇನ್ನಷ್ಟು ಹೆಚ್ಚಿಸಿದೆ.

**ಪ್ರಶಸ್ತಿಗಳ ವಿವರ:** ಶಾಲೆಯ ವಿದ್ಯಾರ್ಥಿಗಳು ವಿವಿಧ ಸ್ಪರ್ಧೆಗಳಲ್ಲಿ ಪಾಲ್ಗೊಂಡು ತಮ್ಮ ಪ್ರತಿಭೆಯನ್ನು ಅನಾವರಣಗೊಳಿಸಿದ್ದು, ಪ್ರಮುಖವಾಗಿ 9 ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಗಳಿಸುವ ಮೂಲಕ ತಮ್ಮ ಸಾಮರ್ಥ್ಯವನ್ನು ಸಾಬೀತುಪಡಿಸಿದ್ದಾರೆ.

ಇದರ ಜೊತೆಗೆ, ವಿದ್ಯಾರ್ಥಿಗಳು 7 ಸ್ಪರ್ಧೆಗಳಲ್ಲಿ ದ್ವಿತೀಯ ಸ್ಥಾನ ಮತ್ತು 4 ಸ್ಪರ್ಧೆಗಳಲ್ಲಿ ತೃತೀಯ ಸ್ಥಾನವನ್ನು ಪಡೆದುಕೊಂಡಿರುತ್ತಾರೆ. ಈ ಮೂಲಕ ಶಾಲೆಯು ಬಹುತೇಕ ಎಲ್ಲ ವಿಭಾಗಗಳಲ್ಲೂ ಯಶಸ್ಸು ಕಂಡಿದೆ.

ಈ ಸಾಧನೆಯು ವಿದ್ಯಾರ್ಥಿಗಳ ಕಠಿಣ ಪರಿಶ್ರಮ, ಶಿಕ್ಷಕರ ಮಾರ್ಗದರ್ಶನ ಹಾಗೂ ಪೋಷಕರ ಪ್ರೋತ್ಸಾಹಕ್ಕೆ ದೊರೆತ ಫಲವಾಗಿದೆ ಎಂದು ಸಂಸ್ಥೆಯ ಅಧ್ಯಕ್ಷ ಮನೋಜ್ ಕುಮಾರ್ ಮಿಶ್ರಾ, ಕಾರ್ಯದರ್ಶಿ ಅನಿಲ್ ಕುಮಾರ್.ಎಚ್, ಸಲಹೆಗಾರ ಆಂಜನೇಯ.ಎಚ್, ಮುಖ್ಯ ಶಿಕ್ಷಕ ರಂಗಪ್ಪ ಹಾಗೂ ಶಾಲೆಯ ಆಡಳಿತ ಮಂಡಳಿ ಹರ್ಷ ವ್ಯಕ್ತಪಡಿಸಿದೆ.

## ಬೃಹತ್ ಆರೋಗ್ಯ ತಪಾಸಣಾ ಶಿಬಿರ ಇಂದು



**ಹೊಸಪೇಟೆ,ಡಿ.5–** ಜಿಲ್ಲಾ ವಾಲ್ಮೀಕಿ ನಾಯಕ ಸೇವಾ ನಿರತ ಮತ್ತು ನಿವೃತ್ತ ನೌಕರರ ಸಂಘ, ಜಿಲ್ಲಾ ಆರೋಗ್ಯ ಇಲಾಖೆ, ದಾವಣಗೆರೆ ಎಸ್.ಎಸ್.ನಾರಾಯಣ ಹೆಲ್ತ್ ಕೇರ್ ಸೆಂಟರ್ ಸಹಯೋಗದಲ್ಲಿ ಡಿ.6 ರಂದು ನಗರದಲ್ಲಿ ಬೃಹತ್ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಂಡಿದ್ದು, ಸ್ತ್ರೀ ರೋಗ ಮತ್ತು ಪ್ರಸೂತಿ ತಜ್ಞರು, ಮಕ್ಕಳ ತಜ್ಞರು, ದಂತ ವೈದ್ಯರು ಸೇರಿದಂತೆ ವಿವಿಧ ಕಾಯಿಲೆಗಳಿಗೆ ಸಂಬಂಧಿಸಿದ 16 ಜನ ನುರಿತ ತಜ್ಞ ವೈದ್ಯರು ಪಾಲ್ಗೊಳ್ಳಲಿದ್ದಾರೆ. ನಗರದ ಸಾರ್ವಜನಿಕರು ಶಿಬಿರದ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಸಂಘದ ಪ್ರಮುಖ ಡಾ.ಕೆ. ಪನ್ನಂಗದರ ಹೇಳಿದರು.


ಹೊಸಪೇಟೆ ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇಲ್ಲಿನ ಆಕಾಶವಾಣಿ ಸಮೀಪದ ಶ್ರೀ ವಾಲ್ಮೀಕಿ ಕಲ್ಯಾಣ ಮಂಟಪದಲ್ಲಿ ಅಂದು ಬೆಳಗ್ಗೆ 10 ಗಂಟೆಗೆ ಆರೋಗ್ಯ ತಪಾಸಣಾ ಶಿಬಿರ ಆರಂಭವಾಗಲಿದ್ದು, ಸಂಜೆ 4.30ರ ವರೆಗೆ ನಡೆಯಲಿದೆ. ಕಾರ್ಯಕ್ರಮವನ್ನು ಜಿಲ್ಲಾ ವೈದ್ಯಾಧಿಕಾರಿ ಡಾ.ಎಲ್.ಆರ್.ಶಂಕರ್ ನಾಯ್ಕ, ಡಿಎಚ್‌ಓ ಡಾ.ಜಂಬಯ್ಯ ನಾಯಕ ಹಾಗೂ ಸಮಾಜದ ಮುಖಂಡರು ಸಾಂಕೇತಿಕವಾಗಿ ಉದ್ಘಾಟಿಸುವರು. ಶಿಬಿರದಲ್ಲಿ ಸುಮಾರು 500 ಜನರು ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದು ತಿಳಿಸಿದರು.

ಡಾ.ಮಹೇಂದ್ರ ಮಾತನಾಡಿ, ಹೃದಯ, ಶ್ವಾಸಕೋಶ, ಮೂತ್ರಕೋಶ, ಮೂತ್ರ ಪಿಂಡ, ಸಕ್ಕರೆ ಕಾಯಿಲೆ, ಬಿಪಿ, ಕಣ್ಣಿನ ತೊಂದರೆ, ರಕ್ತ ಮತ್ತು ಮೂತ್ರ ಪರೀಕ್ಷೆ, ಈಸಿಜಿ, 2ಡಿಇಕೋ, ಗ್ಯಾಸ್ಟ್ರೋಎಂಟ್ರಾಲಾಜಿ ಪರೀಕ್ಷಿಸಲಾಗುತ್ತದೆ. ಮಹಿಳೆಯರಿಗೆ ಸಂಬಂಧಿಸಿ ಗರ್ಭಕೋಶ ಮತ್ತು ಸ್ತನ ಕ್ಯಾನ್ಸರ್ ತಪಾಸಣೆ, ಹುಟ್ಟಿನಿಂದ 18 ವರ್ಷದೊಳಗಿನವರು ಎದುರಿಸುತ್ತಿರುವ ಜನ್ಮ ಜಾತ ಹೃದ್ರೋಗ ತೊಂದರೆ, ಹಿರಿಯರ ನಾಗರಿಕರು ಎದುರಿಸುತ್ತಿರುವ ಸಾಮಾನ್ಯ ಕಾಯಿಲೆಗಳನ್ನೂ ತಪಾಸಣೆ ನಡೆಸಿ, ಸೂಕ್ತ ಸಲಹೆ ನೀಡಲಾಗುತ್ತದೆ ಎಂದು ವಿವರಿಸಿದರು.

ಮತ್ತೋರ್ವ ಡಾ. ಮಹೇಂದ್ರ ತಳವಾರ ಮಾತನಾಡಿ, ಶಿಬಿರದಲ್ಲಿ ಎಲ್ಲ ಕಾಯಿಲೆಗಳ ಬಗ್ಗೆ ತಪಾಸಣೆ ನಡೆಸಲಾಗುತ್ತದೆ. ಹೆಚ್ಚಿನ ಚಿಕಿತ್ಸೆ ಅಗತ್ಯವಿದ್ದಲ್ಲಿ ನಗರದಲ್ಲೇ ಇರುವ ನಮ್ಮ ಕ್ಲಿನಿಕ್‌ಗಳಲ್ಲಿ ಚಿಕಿತ್ಸೆ ನೀಡಲಾಗುತ್ತದೆ. ಇಲ್ಲವೇ, ಬೇರೆಕಡೆ ಶಿಫಾರಸ್ಸು ಮಾಡಲಾಗುತ್ತದೆ. ಜನ ಸಾಮಾನ್ಯರು ಯಾವುದೇ ಕಾಯಿಲೆಗಳ ಲಕ್ಷಣಗಳನ್ನು ಹೊಂದಿದ್ದರೂ, ಚಿಕಿತ್ಸೆ ಪಡೆಯದೇ ನಿರ್ಲಕ್ಷ್ಯ ತೋರುತ್ತಾರೆ. ಇಂತಹ ಶಿಬಿರದಿಂದ ಆರಂಭದಲ್ಲಿ ಉಪಶಮನಗೊಳಿಸಬಹುದು ಎಂದು ಅಭಿಪ್ರಾಯ ಪಟ್ಟರು.

ಪಿಡಬ್ಲ್ಯೂಡಿ ನಿವೃತ್ತ ಅಭಿಯಂತರ ಕಿಶೋರ್ ಕುಮಾರ್, ಮುನಿರಾಬಾದ್ ನಿವೃತ್ತ ಅಭಿಯಂತರ ಕೆ.ಬಿ.ಶಿವಶಂಕರ್, ಸಮಾಜದ ಪ್ರಮುಖರಾದ ನಾಗರಾಜ್ ಕಮತಗಿ, ಕಿನ್ನಾಳ ದೇವರಮನೆ ಶ್ರೀನಿವಾಸ ಇದ್ದರು.

## ಪುತ್ರನ ಮದುವೆ ಔತಣಕೂಟದಲ್ಲಿ ಪುಸ್ತಕ ಕಾಣಿಕೆ ಸ್ವೀಕರಿಸಿ ವಿದ್ಯಾರ್ಥಿಗಳಿಗೆ ವಿತರಣೆ



**ಕಲಬುರಗಿ,ಡಿ.5–**ಮದುವೆ ಔತಣ ಕೂಟದಲ್ಲಿ ಕಾಣಿಕೆ ಸ್ವೀಕರಿಸುದು ಸಹಜ. ಆದರೆ, ಶಾಲಾ ಶಿಕ್ಷಣ ಇಲಾಖೆಯ ನಿವೃತ್ತ ಪ್ರಥಮ ದರ್ಜೆ ಸಹಾಯಕರಾದ ಆನಂದ ತೀರ್ಥ ಜೋಶಿ ಅವರು ತಮ್ಮ ಪುತ್ರನ ಮದುವೆಯ ಔತಣಕೂಟ ದಲ್ಲಿ ಯಾವುದೇ ಕಾಣಿಕೆಯನ್ನು ಸ್ವೀಕರಿಸದೆ ಸರಕಾರಿ ಪ್ರೌಢಶಾಲೆಯ ಮಕ್ಕಳ ಎಸ್.ಎಸ್.ಎಲ್.ಸಿ ವ್ಯಾಸಂಗಕ್ಕೆ ಉಪಯುಕ್ತವಾದ ಪುಸ್ತಕಗಳನ್ನು ಮಾತ್ರ ಸ್ವೀಕರಿಸಿ, ಅವುಗಳನ್ನು ಸರಕಾರಿ ಶಾಲೆಗಳಿಗೆ ನೀಡುವುದರ ಮುಖಾಂತರ ಸಮಾಜಕ್ಕೆ ಮಾದರಿಯಾಗಿದ್ದಾರೆ.

ಆನಂದತೀರ್ಥ ಜೋಶಿ ಅವರು ಪುತ್ರನ ಮದುವೆ ಔತಣಕೂಟದಲ್ಲಿ ಸ್ವೀಕರಿಸಿದ ಪುಸ್ತಕಗಳನ್ನು ಮಹಾಗಾಂವ ಸರ್ಕಾರಿ ಪ್ರೌಢಶಾಲೆ ಶಾಲೆ, ಅವರಾದ ಸರಕಾರಿ ಪ್ರೌಢಶಾಲೆ, ಖಣದಾಳ ಸರಕಾರಿ ಪ್ರೌಢಶಾಲೆ ಮತ್ತು ಮಾಡಬೂಳ ಸರಕಾರಿ ಪ್ರೌಢ ಶಾಲೆ ಮಕ್ಕಳಿಗೆ ವಿತರಿಸಿ ಇದೇ ರೀತಿ ಸಾರ್ವಜನಿಕರು ಸರಕಾರಿ ಶಾಲೆಗಳ ಮೂಲಸೌಕರ್ಯಗಳಿಗೆ ಅಗತ್ಯ ಸಾಮಗ್ರಿಗಳನ್ನು ನೀಡುವ ಮುಖಾಂತರ ಸರ್ಕಾರಿ ಶಾಲೆಗಳನ್ನು ಸದೃಢಗೊಳಿಸಿದಲ್ಲಿ ಸರ್ಕಾರಿ ಶಾಲಾ ಮಕ್ಕಳಿಗೆ ಶೈಕ್ಷಣಿಕವಾಗಿ ಪೂರಕ ವಾತಾವರಣ ನಿರ್ಮಿಸಿದಂತಾಗುತ್ತದೆ ಎಂದು ತಿಳಿಸಿದರು.

ಮುಂದಿನ ವಾರದಲ್ಲಿ ಪಟ್ಟಣ ಸರ್ಕಾರಿ ಪ್ರೌಢ ಶಾಲೆ , ಮರಗುತ್ತಿ ಸರ್ಕಾರಿ ಪ್ರೌಢಶಾಲೆ , ಕಲಬುರಗಿ ನಗರದ ತಾರಫೈಲ್ ಸರ್ಕಾರಿ ಪ್ರೌಢಶಾಲೆ ಮತ್ತು ಬೆಡಸುರ ಸರ್ಕಾರಿ ಪ್ರೌಢ ಶಾಲೆಗಳಿಗೆ ಪುಸ್ತಕಗಳನ್ನು ನೀಡಲು ಉದ್ದೇಶಿಸಿಸಲಾಗಿದೆ ಎಂದು ತಿಳಿಸಿದರು.

ಸಿ.ಎ.ಶ್ರೀಕಾಂತ್ ನಿರೋಣಿ, ಉಮೇಶ್ ಬಿರಾದಾರ್, ಮಲ್ಲಿಕಾರ್ಜುನ್ ಹಿರೋಳಿ, ಪ್ರಕಾಶ್ ರಾಥೋಡ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಸಿಂಧನೂರು, ಮಸ್ಕಿ ಮೀನುಗಾರಿಕೆ ಇಲಾಖೆಯಿಂದ ಅರ್ಜಿ ಆಹ್ವಾನ

**ರಾಯಚೂರು,ಡಿ.5–** ಜಿಲ್ಲೆಯ ಸಿಂಧನೂರು, ಮಸ್ಕಿ ಮೀನುಗಾರಿಕೆ ಇಲಾಖೆ ವತಿಯಿಂದ 2025–26ನೇ ಸಾಲಿನಲ್ಲಿ ಪ್ರಧಾನಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ ಧರ್ತಿ ಆಭಾ ಜನ ಜಾತೀಯ ಗ್ರಾಮ ಉತ್ಕರ್ಷ ಅಭಿಯಾನ ಯೋಜನೆಯಡಿ ತಾಜಾ ಮೀನು ಮಾರಾಟ ಮಾಡಲು ಜಿಲ್ಲೆಗೆ ನಿಗದಿಯಾಧ ಗುರಿಗಳಾದ ದ್ವಿಚಕ್ರ ವಾಹನ–23, ತ್ರಿಚಕ್ರ ವಾಹನ–04 ಮತ್ತು ನೇರ ಮೀನು ಮಾರಾಟ–02 ಘಟಕಗಳನ್ನು ಅನುಷ್ಠಾನಗೊಳಿಸಲು ಅರ್ಜಿ ಆಹ್ವಾನಿಸಲಾಗಿದೆ.

ಸಿಂಧನೂರು ತಾಲೂಕಿನ ವೀರಾಪೂರು, ಕರಡಚಿಲಮಿ, ಯಾಪಲಪರ್ವಿ, ರಾಗಲಪರ್ವಿ, ಪುಲದಿನ್ನಿ, ಧುಮತಿ, ಹುಲಗುಂಚಿ, ಚಿಂತಮಾನದೊಡ್ಡಿ, ಯದ್ದಲದೊಡ್ಡಿ ಹಾಗೂ ಮಸ್ಕಿ ತಾಲೂಕಿನ ರತ್ನಾಪೂರು, ಗುಂಡ, ಹೊಕ್ರಾಣಿ, ಹೊಗರನಾಳ, ಗುಡಿಹಾಳ, ಬಪ್ಪೂರು, ಮಾಟೂರು, ಚಿಕ್ಕಕಡಬೂರು, ಕ್ಯಾತ್ನಟ್ಟಿ, ಉದ್ಬಾಳ, ದೀನಸಮುದ್ರ, ಪರಾಪೂರು, ನಂಜಲದಿನ್ನಿ, ಹಂಪನಾಳ, ಗುಡಗಲದಿನ್ನಿ, ಹಂಚಿನಾಳ (ಯು), ಕಣ್ಣೂರು, ಹುಲ್ಲುರು, ರಂಗಾಪೂರು, ಮುದ್ದಾಪೂರು, ಕೊಳಬಾಳ, ಗೌಡನಬಾವಿ, ಬೆಳ್ಳಿಗನೂರು, ಸುಲ್ತಾನಾಪೂರು ಮಹಾಂಪೂರು, ಗದ್ರಟಗಿ, ಬೊಗಾಪೂರ, ಬುದ್ದಿನ್ನಿ, ಅಮರಾಪೂರು. ಗ್ರಾಮಗಳ ಆಸಕ್ತ ಅರ್ಜಿದಾರರು ಡಿಸೆಂಬರ್ 24ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ವಿವರಗಳನ್ನು ಮೀನುಗಾರಿಕೆ ಸಹಾಯಕ ನಿರ್ದೇಶಕರು ಸಿಂಧನೂರು ಅವರ ಕಚೇರಿ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಎಂದು ಸಿಂಧನೂರಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನಾಯಿಗಳ ಹಾವಳಿ ತಡೆಯ ಕ್ರಮದ ಚರ್ಚೆಗಾಗಿ ಪಾಲಿಕೆಯಿಂದ ಸಮನ್ವಯ ಸಭೆ ಡಿ.08ಕ್ಕೆ

**ರಾಯಚೂರು,ಡಿ.5–**ಇಲ್ಲಿನ ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಸಂಖ್ಯೆ ಹೆಚ್ಚಾಗುತ್ತಿರುವುದರಿಂದ ಸಾರ್ವಜನಿಕರ ಸುರಕ್ಷತೆ, ಆರೋಗ್ಯ ಮತ್ತು ನಾಯಿಗಳ ಕಲ್ಯಾಣ ಎರಡಕ್ಕೂ ಸಮತೋಲಿತ ಮತ್ತು ಕಾನೂನುಬದ್ಧ ಪರಿಹಾರ ಕಂಡುಕೊಳ್ಳುವ ಸಲುವಾಗಿ ಸುಪ್ರೀಂ ಕೋರ್ಟಿನ ನಿರ್ದೇಶನಗಳನ್ನು ಪಾಲಿಸಲು ಮತ್ತು ಕಾರ್ಯಯೋಜನೆ ರೂಪಿಸುವ ಬಗ್ಗೆ ಚರ್ಚಿಸಲು ನಗರದ ಹಳೆ ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಲ್ಲಿನ ಪಾಲಿಕೆಯ ಕಚೇರಿ ಸಭಾಂಗಣದಲ್ಲಿ ಡಿಸೆಂಬರ್ 8ರ ಬೆಳಿಗ್ಗೆ 11 ಗಂಟೆಗೆ ಸಮನ್ವಯ ಸಭೆ ಹಮ್ಮಿಕೊಳ್ಳಲಾಗಿದೆ.

ಸಭೆಯಲ್ಲಿ, ನಿರಾಶ್ರಿತ ನಾಯಿಗಳನ್ನು ಮಾನವೀಯವಾಗಿ ನಿರ್ವಹಿಸುವ ಮಾರ್ಗಗಳು, ದತ್ತು ಸ್ವೀಕಾರ, ಸ್ಟೆರಿಲೈಸೇಶನ್/ನ್ಯೂಟರಿಂಗ್ (ಎಬಿಸಿ) ಕಾರ್ಯಕ್ರಮಗಳನ್ನು ಬಲಪಡಿಸುವುದು, ಸಾರ್ವಜನಿಕರಲ್ಲಿ ಮೌಲ್ಯಮಾಪನ ಮತ್ತು ಜಾಗೃತಿ ಮೂಡಿಸುವುದು, ಸ್ಥಳೀಯ ಸರ್ಕಾರ, ಪಶುವೈದ್ಯಕೀಯ ಸೇವೆಗಳು ಮತ್ತು ಸ್ವಯಂಸೇವಕ ಸಂಘಟನೆಗಳ ನಡುವೆ ಸಹಕಾರ ನೀಡುವ ಕುರಿತು ಸಭೆಯಲ್ಲಿ ಚರ್ಚಿಸಲಾಗುತ್ತದೆ.

ಎಲ್ಲಾ ನೋಂದಾಯಿತ ಮತ್ತು ಸಕ್ರಿಯ ಪ್ರಾಣಿ ಪ್ರೇಮಿ ಸಂಘಟನೆಗಳು, ಪ್ರಾಣಿ ಕಲ್ಯಾಣ ಸಮಿತಿಯ ಸದಸ್ಯರು, ಪಶು ಚಿಕಿತ್ಸಾಲಯಗಳು ಮತ್ತು ಪಶುವೈದ್ಯರು ಹಾಗೂ ಈ ವಿಷಯದಲ್ಲಿ ಆಸಕ್ತಿ ಹೊಂದಿರುವ ನಾಗರಿಕರಿಂದ ಈ ಸಭೆಯಲ್ಲಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಗುರಿ ಹೊಂದಿಲಾಗಿದ್ದು, ಸಭೆಯಲ್ಲಿ ಭಾಗವಹಿಸಿ ಸಲಹೆ ಸೂಚನೆಗಳನ್ನು ನೀಡಬೇಕೆಂದು ಪಾಲಿಕೆಯ ಪರಿಸರ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈಲು ನಿಲ್ದಾಣಗಳ ಮಧ್ಯೆ ಅಪರಿಚಿತ ವ್ಯಕ್ತಿಯ ಮೃತದೇಹ ಪತ್ತೆ

**ರಾಯಚೂರು,ಡಿ.5–**ಇಲ್ಲಿನ ರೈಲ್ವೆ ಪೊಲೀಸ್ ಠಾಣೆ ವ್ಯಾಪ್ತಿಯ ಠಾಣಾಗುಂದಿ ಮತ್ತು ಯಾದಗಿರಿ ರೈಲು ನಿಲ್ದಾಣಗಳ ಮಧ್ಯೆ ರೈಲ್ವೇ ಕಿ.ಮೀ ನಂ: 638/3–1ರಲ್ಲಿ 30 ರಿಂದ 35 ವಯೋಮಾನದ ಒಬ್ಬ ಅಪರಿಚಿತ ಪುರುಷನು ಯಾವುದೋ ಚಲಿಸುವ ರೈಲು ಗಾಡಿಯಿಂದ ಆಯಾತಪ್ಪಿ ಕೆಳಗಡೆ ಬಿದ್ದು ಗಾಯಗೊಂಡು ಆಕಸ್ಮಿಕವಾಗಿ ಮೃತಪಟ್ಟಿದ್ದು, ಠಾಣೆಯಲ್ಲಿ ಯು.ಡಿ.ಆರ್ ನಂ: 64/2025 ಯು/ಎಸ್ 194 ಬಿ.ಎನ್.ಎಸ್.ಎಸ್. ರಿತ್ಯಾ ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿದೆ.

ಅಪರಿಚಿತ ಗಂಡಸು ಸುಮಾರು 5.6 ಅಡಿ ಎತ್ತರ, ದುಂಡು ಮುಖ, ಉದ್ದನೆಯ ಮೂಗು, ಕಪ್ಪು ಕಣ್ಣುಗಳು, ತಲೆಯಲ್ಲಿ 3 ಇಂಚು ಕಪ್ಪು ಕೂದಲು, ಗಡ್ಡ ಮೀಸೆ ಬಿಟ್ಟಿರುತ್ತಾನೆ. ಸಾಧಾರಣ ಶರೀರ ಹೊಂದಿರುತ್ತಾನೆ.

ಒಂದು ಕಂದು ಬಣ್ಣದ ಹೂವಿನ ಡಿಸೈನ್ ಇರುವ ರೆಡಿಮೇಡ್ ಶರ್ಟ, ಒಂದು ಹಸಿರು ಬಣ್ಣದ ಮಿಲ್ಟನ್ ಕಂಪನಿ ಚಡ್ಡಿ, ಒಂದು ನೀಲಿ ಬಣ್ಣದ ಜೀನ್ಸ್ ಪ್ಯಾಂಟು ಧರಿಸಿದ್ದಾನೆ.ಮೃತದೇಹ ದೊರೆತ ಘಟನಾ ಸ್ಥಳದಲ್ಲಿ ಮೃತನ ವಾರಸುದಾರರು ಪತ್ತೆಯಾಗಿರುವುದಿಲ್ಲ. ಆದ್ದರಿಂದ ಮೃತನ ವಾರಸುದಾರರ ಪತ್ತೆ ಹಾಗೂಪಿ.ಎಂ.ಇ. ಸಲುವಾಗಿ ಮೃತದೇಹವನ್ನು ಯಾದಗಿರಿ ಜಿಲ್ಲಾ ಸರಕಾರಿ ಯೀಮ್ಸ್ ಆಸ್ಪತ್ರೆಯ ಶೀತಲಶವಗಾರದಲ್ಲಿಟ್ಟಿರುತ್ತದೆ.ಮೃತನ ವಾರಸುದಾರರು ಪತ್ತೆಯಾದಲ್ಲಿ ಅಥವಾ ಮೃತನ ಹೋಲಿಕೆಯ ಪುರುಷ ಕಾಣೆಯಾದ ಪ್ರಕರಣ ದಾಖಲಾಗಿದ್ದಲ್ಲಿ ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 08532–231716 ಅಥವಾ ಮೊಬೈಲ್ ನಂಬರ್:9480802111 ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ: 080–2287129ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ರೈಲ್ವೆ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H